ವಿಜಯಪುರ | ಸಂಪುಟ 04 | ಸಂಚಿಕೆ 135 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಶನಿವಾರ, ಜುಲೈ, 18, 2026

ಪ್ರಾದೇಶಿಕ ಪಕ್ಷ ಉಳಿಯೋದು ಎಷ್ಟು ಕಷ್ಟ ಅಂತ ಗೊತ್ತಿದೆ. 18 ಸ್ಥಾನ ಗೆದ್ದು ಇನ್ನೂ ಉಳಿದಿದ್ದೇವೆ. ಕಾಂಗ್ರೆಸ್ 100 ವರ್ಷಗಳ ಪಕ್ಷ, ತಮಿಳುನಾಡಿನಲ್ಲಿ ಡಿಎಂಕೆ ತಲೆ ಮೇಲೆ ಕೈ ಇಟ್ರಿ. ಪಂಜಾಬ್, ಬಿಹಾರದಲ್ಲಿ ಎಲ್ಲಿಗೆ ಬಂದು ನಿಂತಿದ್ದೀರಾ? ನಿಮ್ಮ ಸ್ಥಾನ ಎಷ್ಟಿದೆ ನೋಡಿಕೊಳ್ಳಿ."



■ ಎಚ್.ಡಿ.ಕುಮಾರಸ್ವಾಮಿ
ಕೇಂದ್ರ ಸಚಿವರು

## ಆಪ್ತ ಸಮಾಲೋಚನೆ & ಪರೀಕ್ಷಾ ಕೇಂದ್ರ ಸ್ಥಾಪನೆಗೆ ಆಗ್ರಹ



■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿದ್ದ ಸಮಗ್ರ ಆಪ್ತ ಸಮಾಲೋಚನಾ ಮತ್ತು ಪರೀಕ್ಷಾ ಕೇಂದ್ರ (ಐ.ಸಿ.ಟಿ.ಸಿ.) ಅನ್ನು ತಕ್ಷಣ ಮರುಸ್ಥಾಪಿಸುವಂತೆ ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಘಟಕದ ಅಧ್ಯಕ್ಷ ರವಿ ಗೊಳಸಂಗಿ ನೇತೃತ್ವದಲ್ಲಿ ಕಾರ್ಯಕರ್ತರು ಶುಕ್ರವಾರ ತಹಶೀಲ್ದಾರ್ ಸಂತೋಷ ಮ್ಯಾಗೇರಿ ಅವರ ಮುಖಾಂತರ ವಿಜಯಪುರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಕೊಲ್ಹಾರ ಹೊಸ ತಾಲೂಕು ಕೇಂದ್ರವಾಗಿದ್ದು, ರೋಣಿಹಾಳ, ತೆಲಗಿ, ಕೂಡಗಿ, ಮುಳವಾಡ ಸೇ-ರಿದಂತೆ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಆರೋಗ್ಯ ಸೇವೆಗಾಗಿ ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರವನ್ನು ಅವಲಂಬಿಸಿದ್ದಾರೆ. ಇಲ್ಲಿ ಕಾರ್ಯನಿರ್ವಹಿಸುತ್ತಿದ್ದ ಐ.ಸಿ.ಟಿ.ಸಿ. ಕೇಂದ್ರದ ಮೂಲಕ ಎಚ್‌ಐವಿ ಪರೀಕ್ಷೆ, ಆಪ್ತ ಸಮಾಲೋಚನೆ ಹಾಗೂ ಜಾಗೃತಿ ಸೇವೆಗಳು ಪರಿಣಾಮಕಾ-ರಿಯಾಗಿ ದೊರೆಯುತ್ತಿದ್ದು, ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಿತ್ತು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಯಾವುದೇ ಸಮರ್ಪಕ ಕಾರಣವಿಲ್ಲದೆ ಐ.ಸಿ.ಟಿ.ಸಿ. ಕೇಂದ್ರವನ್ನು ಸ್ಥಗಿತಗೊಳಿಸಿರುವುದ-ರಿಂದ ಸುಮಾರು 28 ರಿಂದ 30 ಸಾವಿರ ಜನಸಂಖ್ಯೆ ಹೊಂದಿರುವ ಕೊಲ್ಹಾರ ತಾಲೂಕಿನ ಜನರು ಅಗತ್ಯ ಆರೋಗ್ಯ ಸೇವೆಯಿಂದ ವಂಚಿತರಾಗಿದ್ದಾರೆ. ಎಚ್‌ಐವಿ ಕುರಿತು ಜಾಗೃತಿ ಮೂಡಿಸುವುದು, ಸಮಯೋಚಿತ ಪರೀಕ್ಷೆ ನಡೆಸುವುದು ಹಾಗೂ ಸೋಂಕಿತರನ್ನು ಚಿಕಿತ್ಸೆಗೆ ಸಂಪರ್ಕಿಸುವ ಮಹತ್ವದ ಸೇವೆಗಳು ಸ್ಥಗಿತಗೊಂಡಿವೆ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಈಗಾಗಲೇ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೆ ಏರಿಸಲಾಗಿದ್ದು, ಸಿಬ್ಬಂದಿ ಕೊರತೆಯೂ ಇದೆ. ಇಂತಹ ಸಂದರ್ಭದಲ್ಲಿ ಐ.ಸಿ.ಟಿ.ಸಿ. ಕೇಂದ್ರವನ್ನು ಮುಚ್ಚಿರುವುದು ಸಾರ್ವಜನಿಕರ ಹಿತದೃಷ್ಟಿಯಿಂದ ಸಮಂಜಸವಲ್ಲ. ಬಸವನ ಬಾಗೇವಾಡಿ ಹಾಗೂ ನಿಡಗುಂದಿಯಲ್ಲಿ ಈ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರುವಾಗ ಕೊಲ್ಹಾರದಲ್ಲಿ ಮಾತ್ರ ಸ್ಥಗಿತಗೊಳಿಸಿರುವುದು ಜನರಿಗೆ ತೊಂದರೆ ಉಂಟುಮಾಡಿದೆ ಎಂದು ತಿಳಿಸಿದ್ದಾರೆ.

ಆದ್ದರಿಂದ ಕೊಲ್ಹಾರ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸಮಗ್ರ ಆಪ್ತ ಸಮಾಲೋಚನಾ ಮತ್ತು ಪರೀಕ್ಷಾ ಕೇಂದ್ರವನ್ನು ಕೂಡಲೇ ಮರುಸ್ಥಾಪಿಸಿ ಅಗತ್ಯ ಸಿಬ್ಬಂದಿಯನ್ನು ನೇಮಕ ಮಾಡಬೇಕು. ಇಲ್ಲವಾದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಘಟಕದ ವತಿಯಿಂದ ಉಗ್ರ ಹೋರಾಟ ಹಮ್ಮಿಕೊಳ್ಳುವುದು ಅನಿವಾರ್ಯವಾಗಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಸುರೇಶ ಸಾರವಾಡ, ಶಂಕ್ರಪ್ಪ ಗೊಳಸಂಗಿ , ಸುನೀಲ ಕೋರಿ, ಶಿವು ವಾಲಿಕಾರ, ಈರಣ್ಣ ಬಿರಾದಾರ, ಶಿವನಗೌಡ ಬಿರಾದಾರ, ಸುಧಾಕರ ದಳವಾಯಿ ಇತರರು ಇದ್ದರು

# ಸಿದ್ದರಾಮಯ್ಯ ಜೊತೆ ಯಾವುದೇ ಭಿನ್ನಾಭಿಪ್ರಾಯವಿಲ್ಲ

## ರಾಜಕೀಯ ಲಾಭಕ್ಕೆ ಕೆಲವರು ಗಾಳಿ ಸುದ್ದಿ ಹಬ್ಬಿಸುತ್ತಿದ್ದಾರೆ | ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಸ್ಪಷ್ಟನೆ




ನವದೆಹಲಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಯಾವುದೇ ಭಿನ್ನಾಭಿಪ್ರಾಯ ಅಥವಾ ಗೊಂದಲ ಇಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಸ್ಪಷ್ಟಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ನನ್ನ ಮತ್ತು ಸಿದ್ದರಾಮಯ್ಯ ಅವರ ನಡುವೆ ಭಿನ್ನಾಭಿಪ್ರಾಯವಿದೆ ಎಂಬ ಭಾವನೆ ಮೂಡಿಸಲು ಕೆಲವರು ಉದ್ದೇಶಪೂರ್ವಕವಾಗಿ ಪ್ರಯತ್ನಿಸುತ್ತಿದ್ದಾರೆ. ಅದರಿಂದ ರಾಜಕೀಯ ಲಾಭ ಪಡೆಯುವ ಲೆಕ್ಕಾಚಾರ ಅವರದ್ದಾಗಿದೆ. ಆದ-'ರೆ, ಇಂತಹ ಪ್ರಯತ್ನಗಳು ಹೆಚ್ಚು ಕಾಲ ಯಶಸ್ವಿಯಾಗುವುದಿಲ್ಲ" ಎಂದು ಹೇಳಿದರು.

ನಮ್ಮದು ಸುಮಾರು 30 ವರ್ಷಗಳ ರಾಜಕೀಯ ಹಾಗೂ ವೈಯಕ್ತಿಕ ಸಂಬಂಧ. ನಮ್ಮಿಬ್ಬರ ನಡುವೆ ಯಾವುದೇ ಗೊಂದಲ ಇಲ್ಲ. ನಾನು ಮಾತನಾಡಿದ ಸಂದರ್ಭದಲ್ಲಿ ಸಿದ್ದರಾಮಯ್ಯ ಅವರ ಹೆಸರನ್ನೇ ಉಲ್ಲೇಖಿಸಿರಲಿಲ್ಲ. ಅದಕ್ಕೆ ಅವರ ಹೆಸರನ್ನು ಸೇರಿಸಿದ್ದು ಮಾಧ್ಯಮವೇ" ಎಂದು ಸ್ಪಷ್ಟನೆ ನೀಡಿದರು.

ಕಾಂಗ್ರೆಸ್ ನಾಯಕರು ರಣದೀಪ್ ಸಿಂಗ್ ಸುರ್ಜೇವಾಲಾ ಹಾಗೂ ಕೆ.ಸಿ. ವೇಣುಗೋಪಾಲ್ ಅವರೊಂದಿಗೆ ನಡೆದ ಸಭೆಯಲ್ಲಿ ಸಚಿವ ಸಂಪುಟ ವಿಸ್ತರಣೆ ಕುರಿತು ಸುದೀರ್ಘ ಚರ್ಚೆ ನಡೆಸಲಾಗಿದೆ ಎಂದು ತಿಳಿಸಿದರು.

ಸಚಿವ ಸಂಪುಟ ವಿಸ್ತರಣೆ ಕುರಿತು ನಮ್ಮ ಅಭಿಪ್ರಾಯವನ್ನು ಪಕ್ಷದ ಹೈಕಮಾಂಡ್‌ಗೆ ತಿಳಿಸಿದ್ದೇವೆ. ಅಂತಿಮ ತೀರ್ಮಾನವನ್ನು ಪಕ್ಷದ ವರಿಷ್ಠರು ಕೈಗೊಳ್ಳಲಿದ್ದಾರೆ" ಎಂದರು.

ಇದೇ ವೇಳೆ ಸಚಿವ ಸಂಪುಟ ವಿಸ್ತರಣೆ ಶೀಘ್ರದಲ್ಲೇ ನಡೆಯುವ ವಿಶ್ವಾಸ ವ್ಯಕ್ತಪಡಿಸಿದ ಅವರು, ಹೊಸ ಮುಖಗಳಿಗೆ ಅವಕಾಶ ನೀಡುವುದರಿಂದ ಪಕ್ಷ ಮತ್ತಷ್ಟು ಬಲಿಷ್ಠವಾಗಲಿದೆ. ಅವರಿಗೆ ಸಚಿವ ಸ್ಥಾನ ನೀಡುವುದು ಭವಿಷ್ಯದಲ್ಲಿ ಪಕ್ಷಕ್ಕೆ ದೊಡ್ಡ ಆಸ್ತಿಯಾಗಲಿದೆ ಎಂದು ಹೇಳಿದರು.

ಜೊತೆಗೆ, ಬೆಳಗಾವಿ ಜಿಲ್ಲೆಗೆ ಸಚಿವ ಸಂಪುಟದಲ್ಲಿ ಮತ್ತೊಂದು ಸ್ಥಾನ ನೀಡಬೇಕು ಎಂಬ ಬೇಡಿಕೆಯನ್ನು ಪುನರುಚ್ಚ-ರಿಸಿದ ಸತೀಶ್ ಜಾರಕಿಹೊಳಿ, ಜಿಲ್ಲೆಯ ಸಮರ್ಪಕ ಪ್ರತಿನಿಧಿತ್ವಕ್ಕೆ ಆದ್ಯತೆ ನೀಡುವಂತೆ ಒತ್ತಾಯಿಸಿದರು.

# ಬೆಳೆ ವಿಮೆ ಮಾಡಿಸಲು ರೈತರಿಗೆ ಡಿಸಿ ಡಾ.ಆನಂದ್ ಮನವಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: 2026-27 ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ವಿಮೆ ಕುರಿತು ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಗೆ ಸರಕಾರ ಅಧಿಸೂಚನೆ ಹೊರಡಿಸಿದ್ದು, ಜಿಲ್ಲೆಯಲ್ಲಿ ವಿವಿಧ ಬೆಳೆಗಳಿಗೆ ರೈತರು ಬೆಳೆ ವಿಮೆ ಮಾಡಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಡಾ.ಆನಂದ ಕೆ.ಅವರು ತಿಳಿಸಿದ್ದಾರೆ.

ತಾಲ್ಲೂಕುವಾರು ಹಾಗೂ ಗ್ರಾಮ ಪಂಚಾಯಿತಿವಾರು ಅಧಿಸೂಚಿಸಲಾಗಿರುವ ವಿವಿಧ ಬೆಳೆಗಳ ವಿಮಾ ಮೊತ್ತ, ವಿಮಾ ಕಂತು ಮತ್ತು ನೋಂದಣಿಯ ಅಂತಿಮ ದಿನಾಂಕದ ಮಾಹಿತಿಯನ್ನು ರೈತ ಸಂಪರ್ಕ ಕೇಂದ್ರ ಹಾಗೂ ತಾಲೂಕು ಸಹಾಯಕ ಕೃಷಿ ನಿರ್ದೇಶಕರು ಕಚೇರಿಗಳಿಗೆ ಸಂಪರ್ಕಿಸಬಹುದಾಗಿದೆ ಎಂದವರು ತಿಳಿಸಿದ್ದಾರೆ.

ಈ ಯೋಜನೆಗೆ ಒಳಪಡುವ ವಿವಿಧ ಬೆಳೆಗಳಿಗೆ, ಬೆಳೆ ಸಾಲ ಪಡೆದ ರೈತರು, ಸಾಲ ನೀಡಿದ ಬ್ಯಾಂಕ್ ಗಳಲ್ಲಿ ವಿಮೆ ನೋಂದಾಯಿಸಬೇಕು.

ಜೊತೆಗೆ ಬೆಳೆ ಸಾಲ ಪಡೆಯದ ರೈತರು ನೋಂದಣಿಗಾಗಿ ಅರ್ಜಿ ಜೊತೆ ಕೃಷಿ ಸಾಲ ಪಡೆಯದಿರುವ ಕುರಿತು ಕಡ್ಡಾಯವಾಗಿ ಸ್ವಯಂ ಘೋಷಣೆ ಪತ್ರ ಲಗತ್ತಿಸಬೇಕು.

ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ, ಆಧಾರ ಸಂಖ್ಯೆ ಜೋಡಿಸಿದ ಬ್ಯಾಂಕ್ ಪಾಸ್ ಬುಕ್ ಮತ್ತು ಆಧಾರ್ ಸಂಖ್ಯೆಯೊಂದಿಗೆ ಡಿಸಿಸಿ/ ಇತರೆ ಬ್ಯಾಂಕ, ಗ್ರಾಮ್ ಓನ್ ಮತ್ತು ಸಿ.ಎಸ್.ಸಿ ಕೇಂದ್ರಳಿಗೆ ಸಂಪರ್ಕಿಸಬಬಹುದಾಗಿದೆ ತಿಳಿಸಿದ್ದಾರೆ.

ಗ್ರಾಮ ಪಂಚಾಯಿತಿ ಮಟ್ಟದ ಬೆಳೆಗಳು (ತೊಗರಿ ಮಳೆಯಾಶ್ರಿತ), ತೊಗರಿ (ನೀರಾವರಿ), ಮುಸುಕಿನ ಜೋಳ (ನೀರಾವರಿ),ಸಜ್ಜೆ (ಮಳೆಯಾಶ್ರಿತ) ವಿಮಾ ಕಂತನ್ನು ಜು.31 ರೊಳಗಾಗಿ ಪಾವತಿಸಬೇಕು ಎಂದವರು ತಿಳಿಸಿದ್ದಾರೆ.

ಹೋಬಳಿ ಮಟ್ಟಕ್ಕೆ ಬೆಳೆಗಳು: ಈರುಳ್ಳಿ (ನೀರು) ಹಾಗೂ ಹತ್ತಿ (ಮಳೆ ಆಶ್ರಿತ) ಬೆಳೆಗಳಿಗೆ ವಿಮೆ ಕಂತನ್ನು ಆಗಸ್ಟ್ 14 ರೊಳಗಾಗಿ ತುಂಬಬಹುದಾದರೆ, ಇನ್ನುಳಿದ ಬೆಳೆಗಳಿಗೆ ಜು.31 ರೊಳಗಾಗಿ ವಿಮಾ ಕಂತು ತುಂಬಬೇಕು ಎಂದು ತಿಳಿಸಿದ್ದಾರೆ. ರೈತರು ನೋಂದಣಿಗಾಗಿ ಕಡ್ಡಾಯವಾಗಿ ಎಫ್ ಐಡಿ ಹೊಂದಿರಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇಂದ್ರವೇ ಮಾಡೋದಾದ್ರೆ ರಾಜ್ಯದ ಪಾತ್ರವೇನು : ಜಿಗಜಿಣಗಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ರಾಜ್ಯದಲ್ಲಿ ತೀವ್ರ ಬರಪ-ರಿಸ್ಥಿತಿ ಎದುರಾಗಿದ್ದು ಬರಘೋಷಣೆಯಾಗದೆ, ಸಮೀಕ್ಷೆ ನಡೆಸದೇ, ಪ್ರಸ್ತಾವನೆ ಸಲ್ಲಿಸದೇ ಪರಿಹಾರಕ್ಕಾಗಿ ನಿರಂತರವಾಗಿ ಕೇಂದ್ರದತ್ತ ಬೊಟ್ಟು ಮಾಡುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರದ ನಾಯಕರ ವಿರುದ್ಧ ಸಂಸದ ರಮೇಶ ಜಿಗಜಿಣಗಿ ಹರಿಹಾಯ್ದಿದ್ದಾರೆ.

"ಬರಪರಿಹಾರಕ್ಕಾಗಿ ಈಗ ಕೇಂದ್ರಕ್ಕೆ ಪತ್ರ ಬರೆಯುವ ಕುರಿತು ಹೇಳಿಕೆ ನೀಡುತ್ತಿರುವ ಕಾಂಗ್ರೆಸ್ ನಾಯಕರು, ಮೊದಲು ತಮ್ಮ ಜವಾಬ್ದಾರಿ ಏನು ಅಂತ ಯೋಚಿಸಬೇಕು. ಎಲ್ಲದಕ್ಕೂ ಕೇಂದ್ರವೇ ಮಾಡಬೇಕು ಅಂದ್ರೆ ರಾಜ್ಯ ಸರ್ಕಾರದ ಪಾತ್ರವೇನು?" ಎಂದು ಪ್ರಶ್ನಿಸಿದ್ದಾರೆ.

"NDRಈ ಮಾರ್ಗಸೂಚಿ ಪ್ರಕಾರ ರಾಜ್ಯ ತನ್ನ SDRಈ ನಿಧಿಯಿಂದ ಮೊದಲು ಪರಿಹಾರ ನೀಡಬೇಕು. ನಂತರ ಕೇಂದ್ರದಿಂದ ಹೆಚ್ಚುವರಿ ನೆರವು ಕೇಳಬೇಕು. ಆದರೆ ಇಲ್ಲಿ ರಾಜ್ಯ ಸರ್ಕಾರ ಯಾವುದೇ ಕೆಲಸ ಮಾಡದೇ ನೇರವಾಗಿ ಕೇಂದ್ರಕ್ಕೆ ಪತ್ರ ಬರೆಯುತ್ತಿದೆ. ಇದು ಜನರನ್ನು ದಾರಿ ತಪ್ಪಿಸುವ ಕೆಲಸ" ಎಂದು ಅವರು ಕಿಡಿಕಾರಿದ್ದಾರೆ.

ರಾಜ್ಯ ಸರ್ಕಾರ ಕೂಡಲೇ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ, ಸಮೀಕ್ಷೆ ನಡೆಸಿ, ಬರ ಘೋಷಿಸಿ, ರೈತರಿಗೆ ತಕ್ಷಣದ ಪರಿಹಾರ ಘೋಷಿಸಬೇಕು ಎಂದು ಅವರು ಪ್ರಕಟಣೆ ಮೂಲಕ ಒತ್ತಾಯಿಸಿದ್ದಾರೆ.

**ರೈತರ ಪರವಾಗಿ ಒತ್ತಡ ಹೇರುತ್ತೇನೆ**

ಕೇಂದ್ರ ಸರ್ಕಾರವು ಬರಪರಿಹಾರ ನೀಡುವಲ್ಲಿ ಯಾವುದೇ ತಾರತಮ್ಯ ಮಾಡುವುದಿಲ್ಲ. ರಾಜ್ಯ ಸರ್ಕಾರ ಸರಿಯಾದ ಪ್ರಸ್ತಾವನೆ ಮತ್ತು ಅಂಕಿ-ಅಂಶಗಳೊಂದಿಗೆ ಬೇಡಿಕೆ ಸಲ್ಲಿಸಿದರೆ ಕೇಂದ್ರ ತಕ್ಷಣ ಸ್ಪಂದಿಸುತ್ತದೆ ಎಂದು ಅವರು ಭರವಸೆ ವ್ಯಕ್ತಪಡಿಸಿದ್ದಾರೆ.

**ರಾಜ್ಯ ವಿಫಲ, ಕೇಂದ್ರದ ಮೇಲೆ ಗೂಬೆ**

ಬರ ಪರಿಸ್ಥಿತಿ ನಿಭಾಯಿಸುವುದು, ಪರಿಹಾರ ಕಾರ್ಯಗಳನ್ನು ಚುರುಕುಗೊಳಿಸುವುದು ಮತ್ತು ರೈತರಿಗೆ ತಕ್ಷಣದ ನೆರವು ನೀಡುವುದು ರಾಜ್ಯ ಸರ್ಕಾರದ ಪ್ರಾಥಮಿಕ ಜವಾಬ್ದಾರಿ. ಆದರೆ ರಾಜ್ಯ ಸರ್ಕಾರ ತನ್ನ ವೈಫಲ್ಯವನ್ನು ಮುಚ್ಚಿಕೊಳ್ಳಲು ಪ್ರತಿ ಬಾರಿ ಕೇಂದ್ರದ ಮೇಲೆ ಗೂಬೆ ಕೂ-ರಿಸುವ ಪ್ರಯತ್ನ ಮಾಡುತ್ತಿದೆ ಎಂದು ಸಂಸದ ಜಿಗಜಿಣಗಿ ಆರೋಪಿಸಿದ್ದಾರೆ.

**ಬರಪರಿಹಾರ ಕುರಿತು ಕೇಂದ್ರಕ್ಕೆ ಪತ್ರ ಬರೆಯುತ್ತಿರುವ ರಾಜ್ಯದ ವಿರುದ್ಧ ಸಂಸದ ರಮೇಶ ಜಿಗಜಿಣಗಿ ವಾಗ್ದಾಳಿ**

## ಕಾರ್ಯನಿರತ ಪತ್ರಕರ್ತರ ಸಂಘದ ವಾರ್ಷಿಕ ಜಿಲ್ಲಾ ಪ್ರಶಸ್ತಿ ಪ್ರಕಟ




■ ಉದಯರಶ್ಮಿ ದಿನಪತ್ರಿಕೆ

**ಹಿರಿಯ ಪತ್ರಕರ್ತರಾದ ಫಿರೋಜ ರೋಜಿನದಾರ, ದಾನಪ್ಪ ಸೂರಗೊಂಡ, ರಶ್ಮಿ ಪಾಟೀಲ, ಚಿದಂಬರ ಕುಲಕರ್ಣಿ, ಸಂಜಯಕುಮಾರ ಕೊಂಡಗೂಳಿ, ಬಾಬು ತಡ್ಲಗಿ ಡಾ.ಸಂತೋಷ ನವಲಗುಂದ ಸೇರಿದಂತೆ 20 ಸಾಧಕ-ರಿಗೆ ಪ್ರಶಸ್ತಿಯ ಗರಿ**

ವಿಜಯಪುರ: ಜಿಲ್ಲೆಯ ಕಾರ್ಯನಿರತ ಪತ್ರಕರ್ತರ ಸಂಘದ 2026 ನೇ ಸಾಲಿನ ವಾರ್ಷಿಕ ಪ್ರಶಸ್ತಿಗಳನ್ನು ಪ್ರಕಟಿಸಲಾಗಿದ್ದು ಜಿಲ್ಲೆಯ ಒಟ್ಟು 16 ಜನ ಪತ್ರಕರ್ತರು ಮತ್ತು ಇತರೆ ವಿಭಾಗದಿಂದ ನಾಲ್ವರು ಪ್ರಶಸ್ತಿಗೆ ಭಾಜನರಾಗಿದ್ದಾರೆ.

ವಾರ್ಷಿಕ ಪ್ರಶಸ್ತಿ ಪುರಸ್ಕೃತರು

ವಿಜಯಪುರದ ಫಿರೋಜ ರೋಜಿನದಾರ (ಇಂಡಿಯನ್ ಎಕ್ಸ್‌ಪ್ರೆಸ್), ದಾನಪ್ಪ ಸೂರಗೊಂಡ (ಕ್ರಾಂತಿಧ್ವನಿ), ರಶ್ಮಿ ಪಾಟೀಲ (ಕನ್ನಡ ಕಹಳೆ), ಚಿದಂಬರ ಕುಲಕರ್ಣಿ (ಕರ್ನಾಟಕ ಹೆರಾಲ್ಡ್), ಸಂಜಯಕುಮಾರ ಕೊಂಡಗೂಳಿ (ಸಂಜಯ ವಾಣಿ), ಬಾಬು ತಡ್ಲಗಿ (ಇಂಡಿಯಾ ಟುಡೆ & ಆಜ್ ತಕ್), ಸಿಂದಗಿಯ ವಿವೇಕಾನಂದ ಶಾಬಾದಿ (ಪ್ರಜಾ ಪ್ರಗತಿ), ತಿಕೋಟಾದ ಡಾ.ಸಂತೋಷ ನವಲಗುಂದ (ಉದಯರಶ್ಮಿ), ಬಸವನ ಬಾಗೇವಾಡಿಯ ವಾಸುದೇವ ಮ್ಯಾಗೇರಿ (ಉದಯಕಾಲ), ಚಡಚಣದ ಸುಬ್ರಹ್ಮಣ್ಯ ಸಂಗಮ (ಉದಯವಾಣಿ), ಮುದ್ದೇಬಿಹಾಳದ ಸಿದ್ದಪ್ಪ ಚಲವಾದಿ (ವಿಜಯವಾಣಿ), ಆಲಮೇಲದ ಅಬ್ದುಗನಿ ದೇವರಮನಿ (ವಾರ್ತಾ ಭಾರತಿ), ಕಲಕೇರಿಯ ಯಲಗೂರಪ್ಪ ವಡ್ಡೊಡಗಿ (ಸಂಯುಕ್ತ ಕರ್ನಾಟಕ), ನಿಡಗುಂದಿಯ ಚಂದ್ರಶೇಖರ ಬಳ್ಳಾರಿ (ಕನ್ನಡಮ್ಮ), ಕೊಲ್ಹಾರದ ಮಲ್ಲಿಕಾರ್ಜುನ ಗಣಿ (ಸಂಯುಕ್ತ ಕರ್ನಾಟಕ), ಇಂಡಿಯ ಜಹಾಂಗೀರ ದೇಸಾಯಿ (ಸಿದ್ದವಾಣಿ) ಹೀಗೆ ಒಟ್ಟು 16 ಜನ ಪತ್ರಕರ್ತರು ಆಯ್ಕೆಯಾಗಿದ್ದಾರೆ.

ಜಾಹಿರಾತು ವಿಭಾಗದಿಂದ ಕಿರಣ ಕಡಿವಾಲ (ವಿಜಯ ಕರ್ನಾಟಕ), ಶ್ರೀಧರ ಜಾಧವ (ವಿಜಯವಾಣಿ), ವಿತರಕರ ವಿಭಾಗದಿಂದ ನಿಂಗಪ್ಪ ಅವಟಿ ಹಾಗೂ ಮುದ್ರಣ ವಿಭಾಗದಿಂದ ದೇವರಹಿಪ್ಪರಗಿಯ ಸೋಮನಾಥ ನಡಗೇರಿ ಅವರನ್ನು ಹಿರಿಯ ಪತ್ರಕರ್ತರನ್ನೊಳಗೊಂಡ ಪ್ರಶಸ್ತಿ ಆಯ್ಕೆ ಸಮಿತಿಯು ಆಯ್ಕೆ ಮಾಡಿದೆ.

ಪ್ರಶಸ್ತಿ ಪುರಸ್ಕೃತರಿಗೆ ಜುಲೈ 19 ರವಿವಾರ ನಗರದ ಕಂದಗಲ್ ಹಣಮಂತ್ರಾಯ ರಂಗಮಂದಿರದಲ್ಲಿ ಕಾನಿಪ ಸಂಘದ ಜಿಲ್ಲಾ ಘಟಕ ಆಯೋಜಿಸಲಾದ 'ಪತ್ರಿಕಾ ದಿನಾಚರಣೆ' ಯಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದೆಂದು ಸಂಘದ ಜಿಲ್ಲಾಧ್ಯಕ್ಷ ಅಶೋಕ ಯಡಳ್ಳಿ, ಪ್ರಧಾನ ಕಾರ್ಯದರ್ಶಿ ಇಂದುಶೇಖರ ಮಣೂರ ಹಾಗೂ ರಾಜ್ಯ ಕಾರ್ಯಕಾರಿ ಸದಸ್ಯ ಪ್ರಕಾಶ ಬೆಣ್ಣೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜಕ್ಕೆ ನೈತಿಕ ಶಿಕ್ಷಣ ನೀಡುತ್ತಿರುವ ಬಸವಾದಿ ಶರಣರ ವಚನಗಳು

## ಬೆಳಗಾವಿಯಲ್ಲಿ ನಡೆದ ಅನುಭಾವ ಗೋಷ್ಠಿಯಲ್ಲಿ ಸಾಹಿತಿ ಪ್ರೊ.ಜಯಶ್ರೀ ಅಬ್ಬಿಗೇರಿ ಅಭಿಮತ

■ ಉದಯರಶ್ಮಿ ದಿನಪತ್ರಿಕೆ




ಬೆಳಗಾವಿ: '12ನೇ ಶತಮಾನದ ಶರಣರ ವಚನಗಳು ಸಮಾಜಕ್ಕೆ ನೈತಿಕ ಶಿಕ್ಷಣ ನೀಡುತ್ತವೆ. ಮನದ ಕಲ್ಮಶವನ್ನು ನಿವಾರಿಸಿ ಜ್ಞಾನವನ್ನು ಹರಡುವಲ್ಲಿ ವಚನಗಳ ಕೊಡುಗೆ ಅನನ್ಯವಾಗಿದೆ' ಎಂದು ಸಾಹಿತ್ಯ ಪ್ರೊ. ಜಯಶ್ರೀ ಅಬ್ಬಿಗೇರಿ ಹೇಳಿದರು.

ಇಲ್ಲಿನ ಶಿವಬಸವ ನಗರದ ಲಿಂಗಾಯತ ಭವನದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಹಮ್ಮಿಕೊಂಡಿದ್ದ ಅಮಾವಾಸ್ಯೆ ಅನುಭಾವ ಗೋಷ್ಠಿಯಲ್ಲಿ 'ವಚನಗಳಲ್ಲಿ ವ್ಯಕ್ತಿತ್ವ ವಿಕಸನ ಪರಿಕಲ್ಪನೆ' ವಿಷಯ ಕುರಿತು ಅವರು ಮಾತನಾಡಿದರು.

'ಶರಣರ ವಚನಗಳಲ್ಲಿ ಜೀವನ ಮೌಲ್ಯ ಅಡಗಿದೆ. ಅತ್ಯಂತ ಸರಳವಾಗಿ ಬದುಕಿನ ಸೂತ್ರಗಳನ್ನು ಸೂತ್ರೀಕ-ರಿಸಿದವರು ಶರಣರು. ಬಸವಣ್ಣನವರ "ಕಳಬೇಡ ಕೊಲಬೇಡ.." ಎಂಬ ವಚನವು ಮಾನವನ ಸುಂದರ ಬದುಕಿಗೆ ಬಹು ದೊಡ್ಡ ವ್ಯಾಖ್ಯಾನವಾಗಿದೆ. ನಮ್ಮ ಅಂತರಂಗ ಶುದ್ಧಿ, ಬಹಿರಂಗ ಶುದ್ಧಿಗೆ ಇನ್ನೇನು ಬೇಕು ಎಂದರು.

ಮಹಾಸಭೆ ಜಿಲ್ಲಾ ಘಟಕದ ಅಧ್ಯಕ್ಷ ರತ್ನಪ್ರಭಾ ಬೆಲ್ಲದ ಅಧ್ಯಕ್ಷತೆ ವಹಿಸಿದ್ದರು. ಕಾರಂಜಿ ಮಠದ ಗುರುಸಿದ್ಧ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು.

ಮಹಾದೇವಿ ಪಾಟೀಲ ವಚನ ಪ್ರಾರ್ಥನೆ ಮಾಡಿದರು. ಸೋಮಲಿಂಗ ಮಾವಿನಕಟ್ಟಿ, ಪಾರ್ವತಿ ತುಪ್ಪದ ಪರಿಚಯಿಸಿದರು. ಸವಿತಾ ವಿರುಪಾಕ್ಷಿ ವಚನ ವಿಶ್ಲೇಷಣೆ ಮಾಡಿದರು. ಮಹಾದೇವಿ ಅಜಿವಾನ ನಿರೂಪಿಸಿದರು. ಆರ್.ಪಿ. ಪಾಟೀಲ ವಂದಿಸಿದರು. ಎ.ಬಿ.ಮಡಿವಾಳರ ದಾಸೋಹ ಸೇವೆಗೈದರು.



"ಒತ್ತಡದ ಬದುಕಿನಲ್ಲಿ ನಡೆಯುತ್ತಿರುವ ನಾವು ಮಾನಸಿಕ ನೆಮ್ಮದಿಯನ್ನು ಕಳೆದುಕೊಂಡಿದ್ದೇವೆ. ಸಂಯಮವನ್ನು ಕಳೆದುಕೊಂಡು ಬದುಕುವಂತಾಗಿರುವ ಈ ಸಮಯದಲ್ಲಿ ಸಮಾಧಾನ, ವ್ರವಧಾನ, ಅವಧಾನಗಳನ್ನು ಅತ್ಯಂತ ಮಾರ್ಮಿಕವಾಗಿ ಶರಣರು ತಿಳಿಸಿಕೊಟ್ಟಿದ್ದಾರೆ. ಅವರು ಹೇಳಿರುವ ಕಾಯಕ ದಾಸೋಹ, ಪ್ರಸಾದ ಸೂತ್ರಗಳು ನಮ್ಮ ಜೀವನಕ್ಕೆ ಅಡಿಪಾಯವಾಗಿವೆ. ಕರ್ಮ ಸಿದ್ಧಾಂತದ ಕುರಿತು ಅವರು ಹೇಳಿರುವ ರೀತಿ ನಮ್ಮ ಜೀವನಕ್ಕೆ ಸೋಪಾನವಾಗಿದೆ. ವಚನಗಳನ್ನು ಅಭ್ಯಸಿಸಿ ನಮ್ಮ ಜೀವನವನ್ನು ರೂಪಿಸಿಕೊಳ್ಳಬೇಕು."

■ ಜಯಶ್ರೀ ಅಬ್ಬಿಗೇರಿ
ಸಾಹಿತಿ & ಇಂಗ್ಲೀಷ್ ಉಪನ್ಯಾಸಕರು, ಬೆಳಗಾವಿ

# ಮಕ್ಕಳಿಗೆ ಅವಶ್ಯಕ.. ಬಾಹ್ಯ ಮತ್ತು ಆಂತರಿಕ ಪ್ರವಾಸ

■ ಉದಯರಶ್ಮಿ ದಿನಪತ್ರಿಕೆ

**ನಾವು - ನಮ್ಮವರು (ಮಕ್ಕಳ ಬೆಳವಣಿಗೆಯಲ್ಲಿ ಪಾಲಕರ ಪಾತ್ರ ಕುರಿತ ಲೇಖನ ಮಾಲಿಕೆ)**

ಪ್ರವಾಸ.. ಅದರಲ್ಲೂ ಧಾರ್ಮಿಕ ಪ್ರವಾಸ ಮನುಷ್ಯ ಜೀವನದ ಅತ್ಯುತ್ತಮಿಕೆಯನ್ನು ನಮಗೆ ಕೊಡಮಾಡುತ್ತದೆ. ಇತ್ತೀಚಿಗೆ ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಾಣವಾಗಿ ಮಂದಿರದ ಗರ್ಭಗುಡಿಯಲ್ಲಿ ಪುಟ್ಟ ಬಾಲರಾಮನ ಮೂರ್ತಿಯನ್ನು ಸಾವಿರಾರು ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಪ್ರತಿಷ್ಠಾಪಿಸಲಾಯಿತು. ಜಗತ್ತಿನಾದ್ಯಂತ ಈ ದೃಶ್ಯವನ್ನು ಲೈವ್ ನಲ್ಲಿ ನೋಡಿದ ಜನರು ಭಕ್ತಿ ಪರವಶರಾದರೆ, ಭಾರತೀಯರ ಪಾಲಿಗೆ ಇದು ಅವರ ಜೀವನದ ಮಹೋನ್ನತ ಘಳಿಗೆ. ಕಳೆದ ಐದು ಶತಮಾನಗಳಿಂದ ರಾಮನಿಲ್ಲದ ಅಯೋಧ್ಯೆಯಲ್ಲಿ ಅಖಂಡ ಪೂಜೆ ಜಪ ತಪ ಭಜನೆ ಪಾರಾಯಣಗಳು ನಡೆಯುತ್ತಿದ್ದರೂ ರಾಮ ಭಕ್ತರಿಗೆ ಮಂದಿರವಿಲ್ಲದೆ ಹೋಗಿದ್ದು ಅತೀವ ನೋವನ್ನು ಉಂಟು ಮಾಡಿತ್ತು. ಇದೀಗ ಆ ಎಲ್ಲ ನೋವಿಗೆ ಮುಕ್ತಿ ಹಾಡುವಂತೆ ಅಯೋಧ್ಯೆಯ ಭವ್ಯವಾದ ರಾಮ ಮಂದಿರ ನಿರ್ಮಾಣವಾಗಿದ್ದು ಪುಟ್ಟ ಬಾಲ ರಾಮನ ಮೂರ್ತಿಯ ಪ್ರತಿಷ್ಠಾಪನೆಯಾಗಿ ನಮ್ಮೆಲ್ಲರ ಭಕ್ತಿಯ ಶಕ್ತಿಯ ಪ್ರತೀಕವಾಗಿ ಮುದ್ದು ರಾಮ ನಗುತ್ತಾ ನಿಂತಿದ್ದಾನೆ. ಮುಂದಿನ ದಿನಮಾನಗಳಲ್ಲಿ ಅತಿ ಹೆಚ್ಚಿನ ವಾಣಿಜ್ಯೋದ್ಯಮವಾಗಿ ಧಾರ್ಮಿಕ ಪ್ರವಾಸ ತಾಣವಾಗಿ ಅಯೋಧ್ಯೆ ಗುರುತಿಸಿಕೊಳ್ಳುವುದರಲ್ಲಿ ಯಾವುದೇ ಸಂದೇಹವಿಲ್ಲ.





ಕುಟುಂಬದವರ ಜೊತೆ ಜಾತ್ರೆಗೆ ಹೋದಾಗ ಮನೆದೇವರ ದೇವಸ್ಥಾನಗಳಿಗೆ ಹೋದಾಗ ದೊರೆಯುವ ಆನಂದವೇ ಬೇರೆ. ಆಯಾ ಧಾರ್ಮಿಕ ಕ್ಷೇತ್ರಗಳಿಗೆ ಹೋಗಿ ಅಲ್ಲಿನ ನಿಯಮಾವಳಿಗಳನ್ನು ಅನುಸರಿಸಿ ಮುಂಜಾನೆ ಬೇಗನೆ ಸ್ನಾನ ಮಾಡಿ ಮಡಿ ಬಟ್ಟೆಯನ್ನುಟ್ಟು ಸರತಿಯ ಸಾಲಿನಲ್ಲಿ ನಿಂತು ದೈವ ದರ್ಶನ ಮಾಡಿದಾಗ ದೊರೆಯುವ ಕೃತಾರ್ಥ ಭಾವ ಕೃತಜ್ಞತೆಯ ರೂಪದಲ್ಲಿ ಭಕ್ತಿ ಭಾವ ಪರವಶತೆಯನ್ನು ಹುಟ್ಟು ಹಾಕುತ್ತದೆ.

ಘಟ್ಟ ಪ್ರದೇಶಗಳಲ್ಲಿ ಇರುವ ದೇವರ ದರ್ಶನ ಮಾಡಲು ಹೋಗುವಾಗ ದೈವ ಭಕ್ತಿಯ ಜೊತೆಗೆ ಪ್ರಕೃತಿ ಸೌಂದರ್ಯದ ಆಸ್ವಾದನೆಯು ಕೂಡ ಮುಖ್ಯವಾಗುತ್ತದೆ, ಜೊತೆಗೆ ಏನೆಲ್ಲಾ ಆಧುನಿಕ ಸೌಲಭ್ಯಗಳನ್ನು ನಾವು ಹೊಂದಿದ್ದರೂ ಕೂಡ ನಮ್ಮ ಹಿಂದಿನ ಹಿರಿಯರು ಬರಿಗಾಲಿನಲ್ಲಿ ದವಸ ಧಾನ್ಯಗಳನ್ನು ಕಟ್ಟಿಕೊಂಡು ಗುಂಪು ಪ್ರವಾಸಗಳಲ್ಲಿ ಏನೆಲ್ಲ ಸವಾಲುಗಳನ್ನು ತೊಂದರೆಗಳನ್ನು ಎದುರಿಸಿರಬಹುದು ಎಂಬುದರ ಅರಿವಾಗಿ ಅವರ ಆಸಕ್ತಿ, ಉತ್ಸಾಹ ಮತ್ತು ತಾಳ್ಮೆಯ ಕುರಿತು ಧನ್ಯತೆಯ ಭಾವ ಮೂಡುತ್ತದೆ.

ಇನ್ನು ಪಾದಯಾತ್ರೆಯಲ್ಲಿ ಹೋಗುವಾಗ ಪ್ರಕೃತಿಯ ಸೌಂದರ್ಯದ ಜೊತೆ ಜೊತೆಗೆ ಸಾಮುದಾಯಿಕ ಪ್ರಜ್ಞೆಯು ಕೂಡ ಮೂಡುತ್ತದೆ. ಗೊತ್ತಿರಲಿ ಗೊತ್ತಿಲ್ಲದಿರಲಿ ಸಹ ಪ್ರಯಾಣಿಕರೊಂದಿಗೆ ಒಂದು ಬಂಧ ಏರ್ಪಡುತ್ತದೆ. ಎಲ್ಲರೂ ಎಲ್ಲರಿಗೂ ಸಹಾಯ ಮಾಡುತ್ತಾ ಪ್ರಕೃತಿಯ ಆಸ್ವಾದನೆ ಮಾಡುತ್ತಾ, ಭಜನೆ ಹಾಡು ಹೇಳಿಕೊಂಡು ಒಟ್ಟಾಗಿ ಊಟ ಮಾಡುತ್ತಾ ಒಬ್ಬರಿಗೊಬ್ಬರು ಬೆಂಬಲ ನೀಡುತ್ತಾ ಪಾದಯಾತ್ರೆಯಲ್ಲಿ ಸಾಗುವಾಗಿನ ಸಂತಸವೇ ಬೇರೆ. ಊರಲ್ಲಿದ್ದಾಗ ಏನೇ ಮಾಡಿದರೂ ಬಾರದ ನಿದ್ದೆಯಿಂದ ಒದ್ದಾಡುವವರ ದಣಿದ ದೇಹ ಕಲ್ಲಿನ ಬಂಡೆಯ ಮೇಲೆ ಮಲಗಿದರೂ ಕೂಡ ಅನಾಯಾಸವಾಗಿ ಆವರಿಸುತ್ತದೆ. ಊಟದ ರುಚಿಯು ಅಷ್ಟೇ.. ಪ್ರವಾಸದ ವೈಶಿಷ್ಟತೆಯೇ ಇದು.


ಬದಲಾದ ಕಾಲಘಟ್ಟದಲ್ಲಿ ಆನ್ಲೈನ್ ನಲ್ಲಿಯೇ ಎಲ್ಲ ವ್ಯವಸ್ಥೆಗಳು ದೊರೆಯುತ್ತಿದ್ದರೂ ಕೂಡ ಧರ್ಮದರ್ಶನದ ಸರತಿಯಲ್ಲಿ ಸಾಕಷ್ಟು ಹೊತ್ತು ಕಾಯ್ದು ಇನ್ನೇನು ದೇವರ ವಿಗ್ರಹದ ಮುಂದೆ ಬಂದು

ದೇವರ ವಿಗ್ರಹವನ್ನು ಕಣ್ತುಂಬಿಕೊಳ್ಳಬೇಕು ಎನ್ನುವ ಘಳಿಗೆಯಲ್ಲಿ ನಾವು ಕಣ್ಣು ಮುಚ್ಚಿ ದೇವರನ್ನು ನಮಸ್ಕರಿಸುತ್ತೇವೆ. ಹೀಗೇಕೆ ಎಂಬ ಪ್ರಶ್ನೆ ನಮ್ಮನ್ನು ಕಾಡಬಹುದು?.. ಬಾಹ್ಯವಾಗಿ ದೇವರನ್ನು ನೋಡಬೇಕೆಂಬ ನಮ್ಮೆಲ್ಲ ಪ್ರಶ್ನೆಗಳಿಗೆ, ಕುತೂಹಲಕ್ಕೆ, ಕೌತುಕಗಳಿಗೆ ಉತ್ತರವಾಗಿ ದೇವರ ವಿಗ್ರಹ ನಮ್ಮ ಕಣ್ಮುಂದೆ ಇರುವಾಗ ಕಣ್ಣು ಮುಚ್ಚುವುದು ನಮ್ಮ ಆಂತರಿಕ ಮನದಲ್ಲಿರುವ ಭಕ್ತಿಯ ಕಾರಣದಿಂದ. ಸ್ವಯಂ ಪ್ರೇರಿತವಾಗಿ ಕಣ್ಣುಗಳು ಮುಚ್ಚಿಕೊಂಡು ಮನಸ್ಸಿನ ಅಂತರ್ಯದಲ್ಲಿ ತುಂಬಿಕೊಂಡಿರುವ ಆ ಭಗವಂತನಿಗೆ ನಮಿಸುವ ಈ ಕ್ರಿಯೆಯಲ್ಲಿ ಮನಸ್ಸು ತೃಪ್ತಿಯನ್ನು ಹೊಂದುತ್ತದೆ.

ಇಂದಿನ ಡಿಜಿಟಲ್ ಯುಗದಲ್ಲಿ ನಾವು ಕಳೆದುಕೊಂಡಿರುವ ತಾಳ್ಮೆ, ಸಂತೋಷ, ನೆಮ್ಮದಿಗಳ ಹುಡುಕಾಟದಲ್ಲಿ ಇಡೀ ಬದುಕನ್ನೇ ಕಳೆಯುವ



ಜನರು ಪ್ರವಾಸದಲ್ಲಿ ಸ್ವಲ್ಪ ಮಟ್ಟಿಗೆ ನೆಮ್ಮದಿಯನ್ನು ಪಡೆದುಕೊಳ್ಳುವರು. ಇದನ್ನು ಆಂತರಿಕ ಪ್ರವಾಸ ಎಂದು ಹೇಳಬಹುದು. ಬಾಹ್ಯ ಪ್ರಪಂಚದಲ್ಲಿ ಪ್ರವಾಸ ಮಾಡಿದಾಗ ನಮ್ಮ ಕಣ್ಣು, ಕಿವಿ, ಮೂಗು, ಬಾಯಿ, ದೇಹಗಳೆಂಬ ಪಂಚೇಂದ್ರಿಯಗಳಿಗೆ ರಸಾಸ್ವಾದನೆ ದೊರೆತರೆ ಆಂತರಿಕ ಪ್ರವಾಸ ನಮ್ಮೆಲ್ಲ ಚಿಂತೆಗಳನ್ನು, ಕ್ಲೇಶಗಳನ್ನು ಮರೆಸಿ ಉತ್ಸಾಹ ಉಲ್ಲಾಸಗಳನ್ನು ತುಂಬಿ ಬದುಕಿನ ಮುಂದಿನ ಪಯಣಕ್ಕೆ ಸಜ್ಜು ಮಾಡುತ್ತದೆ. ಮೊದಲು ನಿಮ್ಮ ಒಳಗಿನ ತನುವ ಸಂತೈಸಿಕೊಳ್ಳಿ ಮನವ ಸಂತೈಸಿಕೊಳ್ಳಿ ಎಂದು ಮನುಷ್ಯನ ಆಂತರಿಕ ಬದುಕಿನ ನೆಮ್ಮದಿಯ ಕುರಿತು ಪಾಠ ಹೇಳುತ್ತದೆ. ನಮ್ಮೊಳಗಿನ ಆಂತರಿಕ ಶಕ್ತಿ, ಸಾಮರ್ಥ್ಯಗಳ ಪರಿಚಯವನ್ನು ಮಾಡಿಕೊಡುತ್ತದೆ.. ಆದ್ದರಿಂದ ಬಾಹ್ಯ ಪ್ರವಾಸದ ಜೊತೆ ಜೊತೆಗೆ ಆಗಾಗ ಆಂತರಿಕ ಪ್ರವಾಸವನ್ನು ಕೈಗೊಂಡು ನಿಮ್ಮ ಬದುಕನ್ನು ಇನ್ನಷ್ಟು ಅರ್ಥಪೂರ್ಣವಾಗಿಸಿಕೊಳ್ಳಿ



ಲೇಖನ
– ವೀಣಾ ಹೇಮಂತ್ ಗೌಡ ಪಾಟೀಲ.
ಮುಂಡರಗಿ
ಗದಗ ಜಿಲ್ಲೆ



## ಜನಪದ ಸಂಸ್ಕೃತಿ ಉಳಿವಿಗೆ ಸಂಘ-ಸಂಸ್ಥೆಗಳ ಪಾತ್ರ ಶ್ಲಾಘನೀಯ


ಆಳಂದ: ಇಂದಿನ ತಾಂತ್ರಿಕ ಯುಗದಲ್ಲಿ ಸಾಹಿತ್ಯ, ಸಂಗೀತ ಹಾಗೂ ಜನಪದ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಸಂಘ-ಸಂಸ್ಥೆಗಳು ಹಾಗೂ ಸರ್ಕಾರ ಕೈಗೊಳ್ಳುತ್ತಿರುವ ಕಾರ್ಯಗಳು ಶ್ಲಾಘನೀಯವಾಗಿವೆ ಎಂದು ಶಾಂತಯ್ಯ ಹಿರೇಮಠ ಅಭಿಪ್ರಾಯಪಟ್ಟರು.

ತಾಲೂಕಿನ ನೆರೆಯ ಹತಗುಂದಾ ಗ್ರಾಮದ ಶ್ರೀ ಮಹಾಲಕ್ಷ್ಮಿ ದೇವಸ್ಥಾನದ ಆವರಣದಲ್ಲಿ ಬಸವನ ಸಂಗೊಳಗಿ ಶ್ರೀ ಬಸವೇಶ್ವರ ಜಾನಪದ ಕಲಾ ಸಂಘ (ರಿ) ಆಶ್ರಯದಲ್ಲಿ ಆಯೋಜಿಸಿದ್ದ "ನಾದ ನಿರಂಜನ" ಸಾಂಸ್ಕೃತಿಕ ಹಾಗೂ ಸಂಗೀತ ಕಾರ್ಯಕ್ರಮದಲ್ಲಿ ಅವರು ಮುಖ್ಯ ಅತಿಥಿಯಾಗಿ ಮಾತನಾಡಿದರು.

### ವಿಜಯಪುರ ಜಿಲ್ಲೆ ಬರಪೀಡಿತ ಜಿಲ್ಲೆ ಎಂದು ಘೋಷಿಸಲು ಮತ್ತು ಬೂದಿಹಾಳ-ಪೀರಾಪುರ ಏತ ನೀರಾವರಿ ಯೋಜನೆ ಪೂರ್ಣಗೊಳಿಸಲು ಒತ್ತಾಯ

# ರೈತರ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಬೃಹತ್ ಪ್ರತಿಭಟನೆ

■ ಉದಯರಶ್ಮಿ ದಿನಪತ್ರಿಕೆ



ತಾಳಿಕೋಟೆ: ಬೂದಿಹಾಳ- ಪೀರಾಪೂರ ಏತ ನೀರಾವರಿ ಯೋಜನೆ ಸಂಪೂರ್ಣ ಅನುಷ್ಠಾನಗೊಳಿಸುವುದು ವಿಜಯಪುರ ಜಿಲ್ಲೆ ಬರಪೀಡಿತ ಜಿಲ್ಲೆ ಎಂದು ಘೋಷಿಸಬೇಕು ಸೇರಿದಂತೆ ರೈತರ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಶ್ರೀ ಖಾಸ್ಗತೇಶ್ವರ ಮಠದ ಬಾಲಶಿವಯೋಗಿ ಸಿದ್ದಲಿಂಗ ದೇವರ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ವಾಸುದೇವ ಮೇಟಿ ಬಣ) ತಾಲೂಕ ಘಟಕದ ನೇತೃತ್ವದಲ್ಲಿ ರೈತರು ಪಟ್ಟಣದಲ್ಲಿ ಗುರುವಾರ ಬೃಹತ್ ಪ್ರತಿಭಟನೆ ನಡೆಸಿದರು.

ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ನೂರಾರು ಸಂಖ್ಯೆಯಲ್ಲಿ ಸೇರಿದ ತಾಳಿಕೋಟೆ ತಾಲೂಕಿನ ಹಾಗೂ ಸುರಪೂರ ಭಾಗದ ರೈತರ ಪ್ರತಿಭಟನಾ ಮೆರವಣಿಗೆಗೆ ಶ್ರೀ ಖಾಸ್ಗತೇಶ್ವರ ಮಠದ ಸಿದ್ದಲಿಂಗ ದೇವರು ಚಾಲನೆ ನೀಡಿ ಆಶೀರ್ವಚನ ನೀಡಿದರು.

ಅಲ್ಲಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆಯು ಬಸವೇಶ್ವರ ವೃತ್ತಕ್ಕೆ ತಲುಪಿ ಅಲ್ಲಿ ಮಾನವ ಸರ್ಪಳಿ ನಿರ್ಮಿಸಿ ಕೆಲ ಹೊತ್ತು ರಸ್ತೆ ತಡೆ ನಡೆಸಿ ಯೋಜನೆ ವಿಳಂಬ ಖಂಡಿಸಿ ಧಿಕ್ಕಾರ ಕೂಗಿದರು.

ನಂತರ ಅಲ್ಲಿ ಸಮಾವೇಶಗೊಂಡ ನೂರಾರು ರೈತರನ್ನು ಉದ್ದೇಶಿಸಿ ಕರ್ನಾಟಕ ರಾಜ್ಯ ರೈತ ಸಂಘ ಯಾದಗಿರಿ ಜಿಲ್ಲಾ ಅಧ್ಯಕ್ಷ ಮಲ್ಲನಗೌಡ ಹಗರಟಗಿ ಮಾತನಾಡಿ, ಸುಮಾರು 935 ಕೋಟಿ ವೆಚ್ಚದ ಈ ನೀರಾವರಿ ಯೋಜನೆ ಮುಕ್ತಾಯ ಹಂತಕ್ಕೆ ಬಂದಿದೆ. ಇನ್ನು 160 ಕೋಟಿ ಅನುದಾನದಲ್ಲಿ ಪೂರ್ಣಗೊಳ್ಳಲಿದೆ. ಆದರೆ ಜನಪ್ರತಿನಿಧಿಗಳು ಇದಕ್ಕೆ ಇಚ್ಚಾ ಶಕ್ತಿ ತೋರುತ್ತಿಲ್ಲ. ಇದರ ಜೊತೆಗೆ ಈ ಭಾಗದ ರೈತರಿಗೆ ಬೆಳೆ ವಿಮೆ ಪರಿಹಾರ ಸಮರ್ಪಕವಾಗಿ ಸಿಕ್ಕಿಲ್ಲ ಇದರಿಂದ ರೈತರಿಗೆ ಸಾಕಷ್ಟು ತೊಂದರೆಯಾಗುತ್ತಿದೆ ಪರಿಸ್ಥಿತಿ ಹೀಗೆಯೇ ಮುಂದುವರೆದರೆ ಇದಕ್ಕಿಂತಲೂ ಉಗ್ರವಾದ ಹೋರಾಟವನ್ನು ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಬಿಜೆಪಿ ಮುಖಂಡ ಬಸನಗೌಡ ಪಾಟೀಲ ಎಡೆಯಾಪೂರ ಮಾತನಾಡಿ, ಈ ಯೋಜನೆ ಕೆಲವು ತಾಂತ್ರಿಕ ಕಾರಣಗಳಿಂದ ಪೂರ್ಣಗೊಳ್ಳುತ್ತಿಲ್ಲ ಇದಕ್ಕೆ ಕೆಬಿಜೆಎನ್ ಎಲ್ ಅಧಿಕಾರಿಗಳು ಆಸಕ್ತಿ ವಹಿಸಿ ಕೆಲಸ ಮಾಡಬೇಕಾಗಿದೆ ಎಂದರು.

ಮಾಜಿ ಶಾಸಕ ಸೋಮನಗೌಡ ಪಾಟೀಲ ಮಾತನಾಡಿ, ನನ್ನ ಶಾಸಕತ್ವದ ಅವಧಿಯಲ್ಲಿ ನಾನು ಸಾಕಷ್ಟು ಪ್ರಯತ್ನ ಮಾಡಿ ಈ ಯೋಜನೆಯನ್ನು ತಂದಿದ್ದೇನೆ. ಆದರೆ ಇವತ್ತು ಅದನ್ನು ಪೂರ್ಣಗೊಳಿಸಲು ಪ್ರಯತ್ನ ಮಾಡದೇ ಇರುವುದರಿಂದ ರೈತರಿಗೆ ಸಾಕಷ್ಟು ತೊಂದರೆಯಾಗುತ್ತಿದೆ ಪರಿಸ್ಥಿತಿ ಹೀಗೆಯೇ ಮುಂದುವರೆದಲ್ಲಿ ಹೋರಾಟವನ್ನು ಇನ್ನಷ್ಟು ತೀವ್ರಗೊಳಿಸುವುದು ಅನಿವಾರ್ಯವಾಗುತ್ತದೆ ಎಂದರು. ರೈತರ ನಾನಾ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಮುಖ್ಯಮಂತ್ರಿ ಹಾಗೂ ನೀರಾವರಿ ಸಚಿವರಿಗೆ ಪ್ರತ್ಯೇಕವಾಗಿ ಬರೆದ ಮನವಿಗಳನ್ನು ತಹಶೀಲ್ದಾರ್ ಡಾ.ವಿನಯಾ ಹೂಗಾರ ಅವರಿಗೆ ಸಲ್ಲಿಸಲಾಯಿತು.

ಪ್ರತಿಭಟನಾ ಮೆರವಣಿಗೆಯಲ್ಲಿ ಬಿಜೆಪಿ ಮಾಜಿ ಜಿಲ್ಲಾ ಅಧ್ಯಕ್ಷ ಆರ್.ಎಸ್.ಪಾಟೀಲ(ಕೂಚಬಾಳ), ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲೂಕ ಅಧ್ಯಕ್ಷ ರಾಜುಗೌಡ ಅನಂತ ರೆಡ್ಡಿ, ಜಿಲ್ಲಾ ಉಪಾಧ್ಯಕ್ಷ ಬಸನಗೌಡ ಮಾಲಿಪಾಟೀಲ, ಗುಲ್ಬರ್ಗ ಜಿಲ್ಲಾ ಅಧ್ಯಕ್ಷ ಶಾಂತಗೌಡ ಮಾಲಿಪಾಟೀಲ, ರೈತ ಮುಖಂಡರಾದ ಸಂಗನಗೌಡ ಹೆಗರೆಡ್ಡಿ, ಸಿದ್ದು ಬುಳ್ಳಾ, ಮಲ್ಲನಗೌಡ ಪೊಲೀಸ್ ಪಾಟೀಲ, ರಾಜುಗೌಡ ಕೋಳೂರ, ಸುರೇಶಕುಮಾರ ಇಂಗಳಗಿ, ಪ್ರಭುಗೌಡ ನಾಡಗೌಡ ಸೇರಿದಂತೆ ನೂರಾರು ರೈತರು ಭಾಗವಹಿಸಿದ್ದರು.

### ವಿಜಯಪುರ ಮಹಾನಗರ ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ ಹೇಳಿಕೆ

# 2,52,570 ಮತದಾರರ ಗಣತಿ ನಮೂನೆ ವಿತರಣೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಗುರುವಾರ ಮಧ್ಯಾಹ್ನ 12:00 ಗಂಟೆಯವರೆಗೆ 2,52,570 ಮತದಾರರ ಗಣತಿ ನಮೂನೆಗಳನ್ನು ವಿತರಣೆ ಮಾಡಲಾಗಿದ್ದು, ಅದರಲ್ಲಿ 76,777 ಗಣತಿ ನಮೂನೆಗಳು ಡಿಜಿಟೈಜ್ ಮಾಡಲಾಗಿದೆ ಎಂದು ಮಹಾನಗರ ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ ಹೇಳಿದರು. ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ -2026 ಪ್ರಗತಿ ಕುರಿತಂತೆ ನಗರ ಮತಕ್ಷೇತ್ರದ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆನಲೈನನಲ್ಲಿ ಮತದಾರರು ಸಲ್ಲಿಸಿದ ಒಟ್ಟು ಗಣತಿ ನಮೂನೆಗಳು 1979, ಸಂಗ್ರಹಿಸಲಾಗದ/ಗೈರುಹಾಜರಾದ ಮತದಾರರು 11, ಶಾಶ್ವತವಾಗಿ ಸ್ಥಳಾಂತರಗೊಂಡ ಮತದಾರರು 468, ಮರಣ ಹೊಂದಿರುವ ಮತದಾರರು 867 ಈಗಾಗಲೇ ನೋಂದಾಯಿಸಿಕೊಂಡ ಮತದಾರರು 730 ಮತ್ತು ಇತರೆ 69 ಪ್ರಗತಿಯ ಬಗ್ಗೆ ಮಾಹಿತಿ ನೀಡಲಾಯಿತು.

ಈಗಾಗಲೇ ಶೇ.87ರಷ್ಟು ಮತದಾರರಿಗೆ ಮನೆ ಮನೆಗೆ ತೆರಳಿ ಮತದಾರರ ಗಣತಿ ನಮೂನೆಗಳನ್ನು ವಿತರಿಸಲಾಗಿದೆ. ಗಣತಿ ನಮೂನೆ ತಲುಪದಿರುವ ಮತದಾರರ ಗುರುತಿನ ಚೀಟಿಯ ಮಾಹಿತಿ ಹಾಗೂ ಅವರ ದೂರವಾಣಿ ಸಂಖ್ಯೆಗಳನ್ನು ಸಂಗ್ರಹಿಸಿ ಸಂಬಂಧಪಟ್ಟ ಬಿಎಲ್ಒ ಅವರಿಗೆ ನೀಡುವ ಕಾರ್ಯವನ್ನು ಪಾಲಿಕೆಯಿಂದ ಜರುಗಿಸಲಾಗುತ್ತಿದೆ ಎಂದರು. ನಗರದಲ್ಲಿ ಅನೇಕ ಮತದಾರರು ಒಂದಕ್ಕಿಂತ ಹೆಚ್ಚು ಮತದಾರರ ಗುರುತಿನ ಚೀಟಿಯನ್ನು ಹೊಂದಿದ್ದು, ಪರಿಶೀಲಿಸಿ ಒಂದು ಕಡೆ ಮಾತ್ರ ಮತದಾನದ ಹಕ್ಕು ಉಳಿಯುವಂತೆ ಪರಿಶೀಲಿಸಿ ಕ್ರಮಕೈಗೊಳ್ಳುವಂತೆ ರಾಜಕೀಯ ಪಕ್ಷದ ಮುಖಂಡರು ವಿಷಯವನ್ನು ಪ್ರಸ್ತಾಪಿಸಿದರು. ಒಂದು ವೇಳೆ ಉದ್ದೇಶಪೂರ್ವಕವಾಗಿ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಸುಳ್ಳು ಘೋಷಣೆ ಅಥವಾ ಸುಳ್ಳು ಮಾಹಿತಿ ನೀಡಿ ಒಂದಕ್ಕಿಂತ ಹೆಚ್ಚು ಮತದಾರರ ಗುರುತಿನ ಚೀಟಿಯನ್ನು ಉಳಿಸಿಕೊಂಡಲ್ಲಿ ಸೆಕ್ಷನ್ 31 ರಡಿ ಗರಿಷ್ಠ 1 ವರ್ಷ ಶಿಕ್ಷೆ ಅಥವಾ ದಂಡ ಎರಡನ್ನು ವಿಧಿಸಲು ಕಾನೂನಿನಲ್ಲಿ ಅವಕಾಶವಿರುತ್ತದೆ ಎಂಬ ವಿಷಯವನ್ನು ಸಭೆಗೆ ತಿಳಿಸಲಾಯಿತು.

ರಾಜಕೀಯ ಪಕ್ಷಗಳು ತಮ್ಮ ಪಕ್ಷದಿಂದ ನೇಮಕವಾದ ಬಿಎಲ್ ಎಗಳಿಂದ ಪ್ರತಿದಿನಮಾಹಿತಿ ನೀಡಲಾಗುವುದು ಎಂದರು. ಸಂಬಂಧಪಟ್ಟ ಬಿಎಲ್ಒಗಳು, ಮನೆಯ ಸದಸ್ಯರು, ಅಕ್ಕಪಕ್ಕದ ನಿವಾಸಿಗಳೊಂದಿಗೆ ಸ್ಥಳ ಮಹಜರ ಮಾಡಿ, ಮಹಜರ್/ಸ್ಥಳ ಪರಿಶೀಲನಾ ವರದಿಗೆ ಅವರ ಸಹಿಯೊಂದಿಗೆ ಕ್ರಮಕೈಗೊಳ್ಳಲಿದ್ದಾರೆ ಎಂದು ಆಯುಕ್ತರು ತಿಳಿಸಿದರು.

ಯಾವುದೇ ಅರ್ಹ ಮತದಾರರ ಹೆಸರು ಕರಡು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಹಾಗೂ ಯಾವುದೇ ಅನರ್ಹ ಮತದಾರರು ಯಾವುದೇ ಕಾರಣಕ್ಕೂ ಮತದಾರರ ಪಟ್ಟಿಗೆ ಸೇರದಂತೆ ಕ್ರಮವಹಿಸಲು ಎಲ್ಲ ರಾಜಕೀಯ ಪಕ್ಷಗಳ ಬಿಎಲ್ ಎ ಗಳು ಬಿಎಲ್ ಒ ಗಳಿಗೆ ಸಹಕರಿಸಲು ತಿಳಿಸಲಾಯಿತು.

ನಗರ ಮತಕ್ಷೇತ್ರಗಳಲ್ಲಿ ಒಟ್ಟು 285 ಮತಗಟ್ಟೆಗಳಿದ್ದು ಈ ಪೈಕಿ 72 ಮತಗಟ್ಟೆಗಳು 1200ಕ್ಕಿಂತ ಹೆಚ್ಚಿನ ಮತದಾರರಿದ್ದಾರೆ. ಹಾಗಾಗಿ ಸಮೀಪದ ಮತಗಟ್ಟೆಗಳಿಗೆ ಹೆಚ್ಚಿನ ಮತಗಳನ್ನು ವರ್ಗಾಯಿಸಿ ಅವಶ್ಯವಿದ್ದಲ್ಲಿ ಚುನಾವಣಾ ಆಯೋಗದ ನಿರ್ದೇಶನದಂತೆ ಹೆಚ್ಚುವರಿ ಮತಗಟ್ಟೆಗಳನ್ನು ಸ್ಥಾಪಿಸಲು ಚುನಾವಣಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲು ಸಭೆ ನಿರ್ಧರಿಸಿತು.

### ಗೋಲಗೇರಿಯ ಡಂಬಳ ಕ್ರಾಸ್‌ನಲ್ಲಿ ಸಿಂದಗಿ ಬಿಜೆಪಿ ಮಂಡಲ ಹಾಗೂ ರೈತರ ನೇತೃತ್ವದಲ್ಲಿ ಬೃಹತ್ ರಸ್ತೆ ತಡೆ ಚಳುವಳಿ

# ಕಾಂಗ್ರೆಸ್ ಬುರುಡೆ ಬಿಡುವ ಸರ್ಕಾರ :ಭೂಸನೂರ ವಾಗ್ದಾಳಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಕಾಂಗ್ರೆಸ್ ಸರ್ಕಾರ ರೈತರಿಗೆ ನೀಡಿದ್ದ ಭರವಸೆಗಳನ್ನು ಈಡೇರಿಸದೆ ನಂಬಿಕೆ ದ್ರೋಹ ಮಾಡಿದೆ. ಮಳೆ ಹಾನಿಯಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ತಕ್ಷಣವೇ ಪ್ರತಿ ಹೆಕ್ಟರ್‌ಗೆ ರೂ.50 ಸಾವಿರ ಬೆಳೆ ಪರಿಹಾರ ನೀಡಬೇಕು ಎಂದು ಮಾಜಿ ಶಾಸಕ ರಮೇಶ ಭೂಸನೂರ ಆಗ್ರಹಿಸಿದ್ದಾರೆ. ಸಿಂದಗಿ ತಾಲೂಕಿನ ಗೋಲಗೇರಿಯ ಡಂಬಳ ಕ್ರಾಸ್‌ನಲ್ಲಿ ಸಿಂದಗಿ ಕೊಡಂಗಲ್ ರಾಜ್ಯ ಹೆದ್ದಾರಿ ಕಾಮಗಾರಿಯನ್ನು ಶೀಘ್ರ ಆರಂಭಿಸಬೇಕು, ಗುತ್ತಿಗೆ ಬಸವಣ್ಣ ಏತ ನೀರಾವರಿ ಯೋಜನೆ ಹಾಗೂ ಇಂಡಿ ಐಬಿಸಿ ಕಾಲುವೆಗಳಿಗೆ ತಕ್ಷಣ ನೀರು ಹರಿಸಬೇಕು ಎಂದು ಆಗ್ರಹಿಸಿ ಸಿಂದಗಿ ಬಿಜೆಪಿ ಮಂಡಲ ಹಾಗೂ ರೈತರ ನೇತೃತ್ವದಲ್ಲಿ ಹಮ್ಮಿಕೊಂಡ ಬೃಹತ್ ರಸ್ತೆ ತಡೆ ಚಳುವಳಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ರೈತರ ಸಮಸ್ಯೆಗಳ ಬಗ್ಗೆ ಸರ್ಕಾರ ಸಂಪೂರ್ಣವಾಗಿ ನಿರ್ಲಕ್ಷ್ಯ ವಹಿಸುತ್ತಿದೆ. ಅಭಿವೃದ್ಧಿ ಕಾಮಗಾರಿಗಳು ವಿಳಂಬವಾಗುತ್ತಿವೆ. ಸರ್ಕಾರ ನೀಡಿರುವ ಭರವಸೆಗಳು ಈಡೇರಿಲ್ಲ ಎಂದು ಟೀಕಿಸಿದ ಅವರು, ಕಾಂಗ್ರೆಸ್ ಸರಕಾರ ಬುರುಡೆ ಬಿಡುವ ಸರ್ಕಾರ ಎಂದು ವಾಗ್ದಾಳಿ ನಡೆಸಿ ರಾಜ್ಯ ಸರ್ಕಾರದ ಆಡಳಿತ ಕಾರ್ಯ ವೈಖರಿಯನ್ನು ತೀವ್ರವಾಗಿ ಟೀಕಿಸಿದರು. ಈ ವೇಳೆ ಬಿಜೆಪಿ ಮಂಡಲ ಅಧ್ಯಕ್ಷ ಸಂತೋಷ ಪಾಟೀಲ ಮಾತನಾಡಿ, ಕೊಡಂಗಲ್ ರಾಜ್ಯ ಹೆದ್ದಾರಿ ಕಾಮಗಾರಿಯನ್ನು ಕೂಡಲೇ ಕೈಗೆತ್ತಿಕೊಳ್ಳಬೇಕು. ಸರ್ಕಾರ ಬೇಡಿಕೆಗಳನ್ನು ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ಉಪವಾಸ ಸತ್ಯಾಗ್ರಹ ಸೇರಿದಂತೆ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಇದೇ ಸಂದರ್ಭದಲ್ಲಿ ಸಾವಿರಾರು ರೈತರು, ಬಿಜೆಪಿ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಪ್ರತಿಭಟನೆಯಲ್ಲಿ ಭಾಗವಹಿಸಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆಯಲ್ಲಿ ಗೌಡಣ್ಣ ಆಲಮೇಲ, ಗುರು ತಳವಾರ, ಶರಣು ಮನಗೂಳಿ, ಪ್ರಭುಗೌಡ ಪಾಟೀಲ, ಶ್ರೀಶೈಲ ಚಳ್ಳಗಿ, ಸಿದ್ರಾಮ ಆನಗೊಂಡ, ಪ್ರಶಾಂತ ಕದ್ದರಕಿ, ಅಶೋಕ ನಾರಾಣಪೂರ, ಸೈಪನಸಾಬ ಕೋರವಾರ, ಸಲೀಂ ಭಾಗವಾನ, ಬಾಗೂ ಕೋಟೆಗೋಳ, ಪ್ರಭುಗೌಡ ಪಾಟೀಲ, ಅನಸೂಬಾಯಿ ಪಾರಗೊಂಡ, ಸೇರಿದಂತೆ ಹಲವು ಮುಖಂಡರು, ರೈತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

### ಸರ್ಕಾರಿ ಶಾಲೆಯಂಗಳಕ್ಕೆ ಹಸಿರುಹೊದಿಕೆ ತೊಡಿಸಿದ ಶಿಕ್ಷಕ । ಬೇಡರ ಬೂದಿಹಾಳ ಶಾಲೆಯ ಮುಖ್ಯಗುರು ಕಾರ್ಯಕ್ಕೆ ಗ್ರಾಮಸ್ಥರ ಶ್ಲಾಘನೆ

# ಪರಿಸರ ಕಾಳಜಿ ಮೆರೆಯುತ್ತಿರುವ ಮುಖ್ಯಗುರು ವೈ.ಎಸ್.ಅಮರಿ

■ ಉದಯರಶ್ಮಿ ದಿನಪತ್ರಿಕೆ

■ ವಿಶೇಷ ವರದಿ: ಕೃಷ್ಣಾ ಪೂಜಾರಿ




ಬದಾಮಿ: ಸರ್ಕಾರಿ ಶಾಲೆಯೆಂದರೆ ಹೀಗಳೆಯುವವರೇ ಹೆಚ್ಚು ಜನ. ಹೀಗಿರುವಾಗ ಕೇವಲ ಎರಡೂವರೆ ವರ್ಷದ ಹಿಂದೆ ಬೇರೆ ಶಾಲೆಯಿಂದ ವರ್ಗಾವಣೆಗೊಂಡು ಬಂದ ಶಿಕ್ಷಕರೊಬ್ಬರು ತಾವಿರುವ ಶಾಲೆಯ ಆವರಣವನ್ನು ಹಸಿರಿನಿಂದ ಕಂಗೊಳಿಸುವಂತೆ ಮಾಡಿ ಪರಿಸರ ಕಾಳಜಿ ಮೆರೆದು ಎಲ್ಲರೂ ತಲೆಎತ್ತಿ ನೋಡುವಂತೆ ಮಾಡಿದ್ದಾರೆ.

ಬಾಗಲಕೋಟೆ ಜಿಲ್ಲೆಯ ಬದಾಮಿ ತಾಲೂಕಿನ ಬೇಡರ ಬೂದೀಹಾಳ ಶಾಲೆಯ ಮುಖ್ಯ ಗುರು ವೈ.ಎನ್.ಅಮರಿ ಮಕ್ಕಳಲ್ಲಿ ಪರಿಸರ ಪ್ರಜ್ಞೆ ಮೂಡಿಸುತ್ತಿರುವ ಶಿಕ್ಷಕರು.

ಗ್ರಾಮದ ಎಲ್ಲ ಗುರು ಹಿರಿಯರ ಹಾಗೂ ಎಸ್.ಡಿ.ಎಮ್.ಸಿ ಯವರ ವಿಶ್ವಾಸ ಗಳಿಸಿ, ಸರಕಾರದಿಂದ ಬರುವ ಅನುದಾನವಲ್ಲದೇ ತಮ್ಮ ಸಹೋದ್ಯೋಗಿ ಶಿಕ್ಷಕರ ಸಹಾಯ ಪಡೆದು ತಮ್ಮ ಸ್ವಂತ ಹಣವನ್ನು ವಿನಿಯೋಗಿಸಿ ಇಡೀ ಶಾಲೆಯ ಆವರಣವನ್ನು ಒಂದು ಸುಂದರ ತೋಟವನ್ನಾಗಿಸಿ, ಹಸಿರು ಹೊದಿಕೆ ತೊಡಿಸುವಲ್ಲಿ ಸಫಲರಾಗಿದ್ದಾರೆ.

ಶಾಲೆಯಲ್ಲಿ ಮಕ್ಕಳಿಗೆ ಕೇವಲ ಪಾಠ ಮಾಡಿದರೆ ಸಾಲದು, ಅವರಿಗೆ ಶಿಕ್ಷಣಕ್ಕೆ ಪೂರಕ ವಾತಾವರಣವನ್ನು ನಿರ್ಮಿಸುವುದೂ ಸಹ ಶಿಕ್ಷಕರ ಮತ್ತು ಸಂಬಂಧಿಸಿದ ಅಧಿಕಾರಿಗಳ ಜವಾಬ್ದಾರಿ. ಅದನ್ನು ಮುಖ್ಯ ಗುರು ವೈ.ಎನ್.ಅಮರಿ ಅವರು ಸಮರ್ಥವಾಗಿ ನಿಭಾಯಿಸುವಲ್ಲಿ ಸಫಲರಾಗಿದ್ದಾರೆ.

ಎಲ್ಲ ಶಾಲೆಗಳಲ್ಲೂ

ಮುಖ್ಯ ಗುರು ಅಮರಿ ಹಾಗೂ ಎಲ್ಲ ಸಹೋದ್ಯೋಗಿ ಶಿಕ್ಷಕರಂತೆ ಸಮಾನ ಅಭಿರುಚಿ, ಮನಸ್ಕರಿದ್ದಲ್ಲಿ ಏನೆಲ್ಲಾ ಸಾಧ್ಯ ಎಂಬುದಕ್ಕೆ ಈ ಶಾಲೆ ನಿದರ್ಶನವಾಗಿದೆ.

**ಮಕ್ಕಳಲ್ಲಿ ನಿತ್ಯ ಆನಂದದ ಅನುಭೂತಿ**



ಮುಖ್ಯ ಗುರು ವೈ.ಎನ್.ಅಮರಿ ಅವರು ಈ ಶಾಲೆಗೆ ಬಂದ ಮೇಲೆ ಶಾಲಾ ಕೊಠಡಿಗಳ ಕೊರತೆ ಮನಗಂಡು ಅದಕ್ಕೆ ಆದ್ಯತೆ ನೀಡಿದರು. ಶಾಲಾ ಕೊಠಡಿಗಳ ಗೋಡೆಗಳ ಮೇಲೆ ಮಕ್ಕಳಿಗೆ ಉಪಯುಕ್ತ ಬರಹ, ಹಾಗೂ ಚಿಕ್ಕದಾದ ಅಂಗಳದಲ್ಲಿ ಜವಾರಿ ಬಾಳೆಗಿಡಗನ್ನು ನೆಟ್ಟು ಅವುಗಳಿಗೆ ನೈಸರ್ಗಿಕವಾಗಿ ಲಭ್ಯವಾಗುವ ಸಾವಯವ ಗೊಬ್ಬರ ಹಾಕಿ ಬೆಳೆಸಿ ಮಕ್ಕಳಲ್ಲಿ ಪರಿಸರದ ಬಗ್ಗೆ ಒಲವು ಮೂಡಿಸಿದ್ದಾರೆ. ದಾಸವಾಳ, ಮಲ್ಲಿಗೆ ಇತ್ಯಾದಿ ಹೂವಿನ ಗಿಡಗಳು, ಬಳ್ಳಿಗಳನ್ನು ಮಕ್ಕಳು ನಿತ್ಯ ಸ್ಪರ್ಶಿಸಿ ಆನಂದದ ಅನುಭೂತಿ ಪಡೆಯುತ್ತಾರೆ.



"ಬಾದಾಮಿ ತಾಲೂಕಿನ ಪುಟ್ಟ ಗ್ರಾಮದಲ್ಲಿ ಸರಕಾರಿ ಶಾಲೆಯನ್ನು ಬೆಟ್ಟದಂತೆ ಬೆಳೆಸಿದ ಹೆಗ್ಗಳಿಕೆ ಆ ಶಾಲೆಯ ಮುಖ್ಯ ಗುರುಗಳಾದ ವೈ.ಎನ್.ಅಮರಿ ಇವರಿಗೆ ಸಲ್ಲಬೇಕು. ಭವಿಷ್ಯದ ಪ್ರಜೆಗಳಲ್ಲಿ ಪರಿಸರ ಪ್ರಜ್ಞೆ ಮೂಡಿಸುತ್ತಿರುವ ಇವರ ದೂರದೃಷ್ಟಿ ಅನುಕರಣೀಯ. "

■ ಕೃಷ್ಣಪ್ಪ ಪೂಜಾರಿ (ಸಿಂದಗಿ)
ನಿವೃತ್ತ ಶಿಕ್ಷಕರು, ಬದಾಮಿ

"ಪ್ರತಿಯೊಬ್ಬರು ಸಸಿಗಳನ್ನು ನೆಟ್ಟು, ಹಸಿರು ಹೊದಿಕೆ ಹೆಚ್ಚಿಸಿ, ಪರಿಸರದ ಉಳಿವಿಗಾಗಿ ಕೈಜೋಡಿಸಬೇಕು. ಇದರಿಂದ ಪರಿಸರ ಸ್ವಚ್ಛವಾಗಿ ಬದುಕಲು ಉತ್ತಮ ಗಾಳಿ, ಮಳೆ, ಹಣ್ಣು, ನೆರಳು ಸಿಗುತ್ತದೆ. ನನ್ನೀ ಕಾರ್ಯವನ್ನು ಮಕ್ಕಳು ಆಸಕ್ತಿಯಿಂದ ಗಮನಿಸುತ್ತಾರೆ. ಅವುಗಳ ಪೋಷಣೆಗೆ ಅವರು ಮುಂದಾಗುವುದನ್ನು ಕಂಡಾಗ ನನ್ನ ಶ್ರಮ ಸಾರ್ಥಕ ಎಂಬ ಭಾವ ಮೂಡುತ್ತದೆ."

■ ವೈ.ಎನ್.ಅಮರಿ ಮುಖ್ಯಗುರು, ಬೇಡರ ಬೂದಿಹಾಳ ಸರ್ಕಾರಿ ಶಾಲೆ





## ಯುವಸಿರಿ ಸೌಹಾರ್ದ ಸಹಕಾರಿ ಸಂಘದ ನೂತನ ಶಾಖೆ ಉದ್ಘಾಟನೆ

# ಬಡವರ ಆರ್ಥಿಕ ಸಬಲೀಕರಣಕ್ಕಾಗಿ ಸಂಘ ಸ್ಥಾಪನೆ :ಪಾಟೀಲ

■ ಉದಯರಶ್ಮಿ ದಿನಪತ್ರಿಕೆ

ತಾಳಿಕೋಟೆ: ಜಿಲ್ಲೆಯಲ್ಲಿ ಆರ್ಥಿಕವಾಗಿ ಹಿಂದುಳಿದಿರುವ ಕೂಲಿಕಾರ್ಮಿಕರು, ಸಣ್ಣ ವ್ಯಾಪಾರಸ್ಥರು, ದಿನಗೂಲಿ ನೌಕರರ ಸ್ವಸಹಾಯ ಗುಂಪುಗಳು ಹಾಗೂ ವಿಶೇಷವಾಗಿ ಗ್ರಾಮೀಣ ಭಾಗದ ಜನರಿಗೆ ಆರ್ಥಿಕವಾಗಿ ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ಈ ಯುವಸಿರಿ ಸೌಹಾರ್ದ ಸಹಕಾರಿ ಸಂಘವನ್ನು ಸ್ಥಾಪಿಸಲಾಗಿದೆ ಎಂದು ಯರನಾಳ ಯುವಸಿರಿ ಸೌ.ಸ.ಸಂ.ಅಧ್ಯಕ್ಷರಾದ ಶಂಕರಗೌಡ ಪಾಟೀಲ ಹೇಳಿದರು.

ಗುರುವಾರ ತಾಲೂಕಿನ ಹಿರೂರು ಗ್ರಾಮದಲ್ಲಿ ಸಂಘದ ಹತ್ತನೇ ಶಾಖೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಾಗೇವಾಡಿ ತಾಲೂಕಿನ ಯರನಾಳ ಗ್ರಾಮದಲ್ಲಿ 2001ರಲ್ಲಿ ಆರಂಭವಾದ ಈ ಸಂಘವು ಕೇವಲ 5 ವರ್ಷಗಳಲ್ಲಿ 10 ಶಾಖೆಗಳನ್ನು ಹೊಂದಿದ್ದು, 25 ಕೋಟಿ ಠೇವಣಿ, 30 ಕೋಟಿ ದುಡಿಯುವ ಬಂಡವಾಳ ಹಾಗೂ 1.5 ಕೋಟಿ ಶೇರು ಬಂಡವಾಳ ಹೊಂದಿ ಪ್ರಗತಿ ಹಂತದಲ್ಲಿದೆ. ಸಂಘವು ವಿಶೇಷವಾಗಿ ಮಹಿಳೆಯರ ಆರ್ಥಿಕ ಸಬಲೀಕರಣ–ಕ್ಕಾಗಿ ವಿಶೇಷ ಒತ್ತು ಕೊಟ್ಟು ಕೆಲಸ ಮಾಡುತ್ತಿದೆ. ಗ್ರಾಮೀಣ ಜನರ ಆರ್ಥಿಕ ಸಂಕಷ್ಟವನ್ನು ದೂರ ಮಾಡಿ ಸುಲಭವಾಗಿ ಸಾಲ ಸೌಲಭ್ಯ ಒದಗಿಸುವ ಮೂಲಕ ಅವರ ಆರ್ಥಿಕ ಸಂಕಷ್ಟಗಳಿಗೆ ಸ್ಪಂದಿಸುವ ಹಾಗೂ ದುಡಿಯುವ ಕೈಗಳಿಗೆ ಕೆಲಸ ಕೊಡುವ ದೃಷ್ಟಿಯಿಂದ ಸಂಘವು ಕೆಲಸ ಮಾಡುತ್ತಿದೆ. ಇವತ್ತು ಹಿರೂರ ಗ್ರಾಮದಲ್ಲಿ ಇದರ ಹತ್ತನೇ ಶಾಖೆಯನ್ನು ಆರಂಭಿಸಲಾಗಿದೆ ಇದಕ್ಕೆ ನಿಮ್ಮೆಲ್ಲರ ಸಹಕಾರ ಇರಲಿ ಎಂದರು.

ಈ ಸಮಯದಲ್ಲಿ ಹಿರೂರ ಶಾಖೆಯ ಅಧ್ಯಕ್ಷ ಗುರುಪಾದಪ್ಪ ಕೊಪ್ಪದ, ಉಪಾಧ್ಯಕ್ಷ ರಾಮನಗೌಡ ದೋರನಳ್ಳಿ, ಸಲಹಾ ಸಮಿತಿ ಸದಸ್ಯರಾದ ಪ್ರಭುಗೌಡ ಚೌದ್ರಿ, ಬಸನಗೌಡ ಯರಗಲ್, ಮೌನೇಶ ಬಡಿಗೇರ, ಶಿವಯೋಗಿ ಹಿರೇಮಠ, ಚೇತನ್ ದೇಸಾಯಿ, ದೇವೇಂದ್ರ ತಳವಾರ, ಬೀರಪ್ಪ ಪೂಜಾರಿ, ಬಸಮ್ಮ ದೇ.ಕೊಪ್ಪದ, ಮಹಾದೇವಿ ನಾ.ಬಿರಾದಾರ, ವಲಯ ಅಧಿಕಾರಿ ನಾಗರಾಜ ಎಸ್.ಮದ್ದರಕಿ, ವೇದ ಮೂರ್ತಿ ಸಿ.ಎಂ. ಹಿರೇಮಠ,ತಾಳಿಕೋಟಿ ಯುವಸಿರಿ ಬ್ಯಾಂಕ್ ಅಧ್ಯಕ್ಷರಾದ ಡಾ.ವಿಜಯಲಕ್ಷ್ಮಿ ಹಿರೇಮಠ, ಉಪಾಧ್ಯಕ್ಷ ರೇಣುಕಾ ಚಿಂಚೋಳ್ಳಿ, ಗಣ್ಯರಾದ ಬಸನಗೌಡ ಪಾಟೀಲ, ಐ.ಜಿ.ಹಿರೇಮಠ,ಅಣ್ಣುಗೌಡ ಪಾಟೀಲ, ಪಿಕೆಪಿಎಸ್ ಸದಸ್ಯ ಎಸ್ ಜಿ ಚೌದ್ರಿ, ಪಿಕೆಪಿಎಸ್ ಮಾಜಿ ಅಧ್ಯಕ್ಷರಾದ ದೇವೇಂದ್ರಪ್ಪ ಬಿರಾದಾರ, ದೇವೇಂದ್ರಪ್ಪ ಕೊಪ್ಪದ, ಶಾಂತಗೌಡ ಬಿರಾದಾರ ಹಾಗೂ ಗ್ರಾಮಸ್ಥರು ಇದ್ದರು.

# ಖೈದಿಗಳು ಪರಾರಿ: ಜೈಲಾಧಿಕಾರಿ, ಸಿಬ್ಬಂದಿ ಅಮಾನತು



ಕಲಬುರಗಿ: ನಗರ ಹೊರವಲಯದ ಕೇಂದ್ರ ಕಾರಾಗೃಹದಿಂದ ಮೂರು ಖೈದಿಗಳು ತಪ್ಪಿಸಿಕೊಂಡ ಪ್ರಕರಣ–ಕ್ಕೆ ಸಂಬಂಧಿಸಿದಂತೆ, ನಿರ್ಲಕ್ಷ್ಯ ಮತ್ತು ಕರ್ತವ್ಯ ಲೋಪಕ್ಕೆ ಸಂಬಂಧಿಸಿದ ಜೈಲಾಧಿಕಾರಿ ಮತ್ತು ಸಿಬ್ಬಂದಿಯನ್ನು ಅಮಾನತುಗೊಳಿಸಲಾಗಿದೆ ಹಾಗೂ ತಪ್ಪಿಸಿಕೊಂಡ ಖೈದಿಗಳನ್ನು ಸೆರೆಗಾಗಿ ಪರಿಣಾಮಕಾರಿ ಕ್ರಮಗಳನ್ನು ಅನುಸ–ರಿಸಲು ಪೊಲೀಸ್ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿತ್ತು, ಪರಿಣಾಮವಾಗಿ ಓರ್ವ ಖೈದಿಯನ್ನು ಸೆರೆ ಹಿಡಿಯಲಾಗಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ನಾನು ಗೃಹ ಸಚಿವನಾಗಿ ಜವಾಬ್ದಾರಿ ವಹಿಸಿಕೊಂಡ ಮೇಲೆ ಗೃಹ ಇಲಾಖೆಯ ಪ್ರತಿ ವಿಭಾಗಗಳ ಪರಿಶೀಲನಾ ಸಭೆ ನಡೆಸಿ, ಆ ಎಲ್ಲಾ ವಿಭಾಗಗಳ ಬಲವರ್ಧನೆಗೆ, ಉನ್ನತೀಕರಣಕ್ಕೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲಾ ಕಾರಾಗೃಹಗಳ ಸ್ಥಿತಿಗತಿಗಳ ಪರಿಶೀಲನೆ ಮತ್ತು ಬಂಧಿಖಾನೆ ಸಿಬ್ಬಂದಿಗಳ ಕಾರ್ಯಕ್ಷಮತೆಯ ಪರಿಶೀಲನೆ ನಡೆಸಲಿದ್ದೇನೆ. ಜೈಲುಗಳ ಸುಧಾರಣೆ, ಭದ್ರತಾ ವ್ಯವಸ್ಥೆಯ ಉನ್ನತೀಕರಣ ಮತ್ತು ಅಕ್ರಮಗಳಿಗೆ ಕಡಿವಾಣದಂತಹ ಕ್ರಮಗಳನ್ನು ಕೈಗೊಳ್ಳಲು ಸರ್ಕಾರ ಬದ್ಧವಾಗಿದೆ ಎಂದು ಅವರು ತಮ್ಮ ಟ್ವೀಟನಲ್ಲಿ ತಿಳಿಸಿದ್ದಾರೆ.

ಟೀಕೆಗಳಿಗೆ ಬಾಯ್ತೆರೆದು ಕುಳಿತಿರುವ ಬಿಜೆಪಿ ನಾಯಕರು ಒಮ್ಮೆ ತಮ್ಮ ಅವಧಿಯಲ್ಲಿ ರಾಜ್ಯದ ಜೈಲುಗಳ ಸ್ಥಿತಿ ಹೇಗಿತ್ತು ಎಂಬುದನ್ನು ಅವಲೋಕನ ಮಾಡಿಕೊಂಡರೆ ಒಳಿತು. 2010ರಲ್ಲಿ ಇದೇ ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೊಪ್ಪಳ ಜಿಲ್ಲಾ ಕಾರಾಗೃಹದಿಂದ 8 ಖೈದಿಗಳು ಪರಾ–ರಿಯಾಗಿದ್ದರು. ರಾಜ್ಯದ ಇತಿಹಾಸದಲ್ಲೇ ಇದು ದೊಡ್ಡ ಪ್ರಕರಣ ಎಂದು ಪರಿಗಣಿಸಬಹುದು. ಇದು ಅಂದಿನ ಗೃಹಸಚಿವರ ವೈಫಲ್ಯವೆಂದು ಬಿಜೆಪಿ ಹೇಳುತ್ತದೆಯೇ? ಬಿಜೆಪಿ ಅವಧಿಯಲ್ಲಿ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹವು ಅತಿಥಿ ಗೃಹವಾಗಿ ಬದಲಾಗಿ ಖೈದಿಗಳಿಗೆ ಸಕಲ ಸವಲತ್ತುಗಳು ದೊರಕುತ್ತಿದ್ದ ಸುದ್ದಿಗಳನ್ನು ರಾಜ್ಯ ನೋಡಿದೆ. ಇದು ಬಿಜೆಪಿ ಸರ್ಕಾರದ ವೈಫಲ್ಯ ಎಂಬುದನ್ನು ಒಪ್ಪಿಕೊಳ್ಳುತ್ತಾರಾ ? ಎಂದು ಪ್ರಶ್ನಿಸಿದ್ದಾರೆ.



ಕಲಬುರಗಿ: ಕಲಬುರಗಿ ಜಿಲ್ಲೆಯನ್ನು ಬರಪೀಡಿತ ಘೋಷಿಸಲು ಮತ್ತು ರೈತರ ಸಾಲಮನ್ನಾ ಮಾಡುವಂತೆ ಆಗ್ರಹಿಸುವ ಹೋರಾಟ ಕುರಿತು ಚರ್ಚೆ ನಡೆಸಲು ಪೂರ್ವಭಾವಿ ಸಭೆ ಶಿವಕಾಂತ ಮಹಾಜನ ಕಾರ್ಯಾಲಯದಲ್ಲಿ ನವ ಕರ್ನಾಟಕ ರೈತ ಸಂಘದ ರಾಜ್ಯಾಧ್ಯಕ್ಷ ದಯಾನಂದ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಜರುಗಿತು.ಉಮಾಪತಿ ಪಾಟೀಲ ,ಆದಿನಾಥ ಹೀರಾ,ಭೀಮಶೆಟ್ಟಿ ಮುಕ್ಕಾ,ಶಿವಕುಮಾರ ಪಾಟೀಲ,ಶಿವರಾಜ ಬಿರಾದಾರ ಬನ್ನೂರ,ಶಿವಲಿಂಗಪ್ಪ ಟೆಂಗಳಿ, ಅವರು ಸೇರಿದಂತೆ ಹಲವಾರು ರೈತ ಮುಖಂಡರು ಭಾಗಿಯಾದರು.

# 8 ಗ್ರಾಂ.ಬಂಗಾರದ ಲಾಕೆಟ್ ಪೊಲೀಸ್ ಠಾಣೆಗೆ ಒಪ್ಪಿಸಿ ಪ್ರಾಮಾಣಿಕತೆ ಮೆರೆದ ನಿವೃತ್ತ ನೌಕರ !

ಕಲಬುರಗಿ: ಮನೆ ಹತ್ತಿರದ ಗಾರ್ಡನ್ ಬಳಿ ರಾತ್ರಿ ವೇಳೆ ವಾಕಿಂಗ್ ಮಾಡುತ್ತಿದ್ದಾಗ ದೊರೆತ 60 ಸಾವಿರ ರೂಪಾಯಿ ಮೌಲ್ಯದ 8 ಗ್ರಾಂ.ಬಂಗಾರದ ಲಾಕೆಟನ್ನು ಸಮೀಪದ ಪೊಲೀಸ್ ಠಾಣೆಗೆ ಒಪ್ಪಿಸುವುದರ ಮೂಲಕ ಅಬಕಾರಿ ಇಲಾಖೆ ನಿವೃತ್ತ ನೌಕರರೊಬ್ಬರು ಪ್ರಾಮಾಣಿಕತೆ ಮೆರೆದಿದ್ದಾರೆ.

ನಗರದ ಪ್ರಗತಿ ಕಾಲೋನಿ ನಿವಾಸಿಯಾದ ಅಬಕಾರಿ ಇಲಾಖೆ ನಿವೃತ್ತ ನೌಕರ ಮಡಿವಾಳಪ್ಪ ಸಜ್ಜನ್ ಅವರು ಕಾಲೋನಿ ಹತ್ತಿರವಿರುವ ಏಸು ಗಾರ್ಡನ್ ಬಳಿ ಜು.13 ರಂದು ಸಾಯಂಕಾಲ 7 ಗಂಟೆ ಸುಮಾರಿಗೆ ವಾಕಿಂಗ್ ಮಾಡುತ್ತಿದ್ದರು. ಈ ವೇಳೆ ಬಂಗಾರದ ಲಾಕೆಟ್ ಅವರ ಕಣ್ಣಿಗೆ ಬಿದ್ದಿದೆ. ಯಾರೋ ವಾಕಿಂಗ್ ಮಾಡುತ್ತಿದ್ದ ವೇಳೆ ಅವರ ಕೊರಳಿಂದ ಲಾಕೆಟ್ ಕಳಚಿ ಬಿದ್ದಿರಬಹುದು ಎಂದು ಅರಿತು ಅದನ್ನು ಅವರು ಎಂ.ಬಿ.ನಗರ ಪೊಲೀಸ್ ಠಾಣೆಗೆ ಒಪ್ಪಿಸುವ ಮೂಲಕ ಪ್ರಾಮಾಣಿಕತೆ ಮೆರೆದಿದ್ದಾರೆ.

ವಾಕಿಂಗ್ ಮಾಡುವ ವೇಳೆ ದೊರೆತ ಚಿನ್ನದ ಲಾಕಟನ್ನು ಪೊಲೀಸ್ ಠಾಣೆಗೆ ಒಪ್ಪಿಸಿರುವ ಮಡಿವಾಳಪ್ಪ ಸಜ್ಜನ್ ಅವರ ಪ್ರಾಮಾಣಿಕತೆಯನ್ನು ಕಾಲೋನಿಯ ನಾಗರಿಕರು ಮತ್ತು ಪೊಲೀಸ್ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿ ಪ್ರಶಂಸಿದ್ದಾರೆ.

**ಮಟಕಾ: ಇಬ್ಬರ ಬಂಧನ**

ನಗರದ ರೈಲ್ವೆ ಸ್ಟೇಷನ್ ಏರಿಯಾದ ಸಿಟಿ ಬಸ್ ನಿಲ್ದಾಣ ಮತ್ತು ನಗದ ಖಿಲಾ ಹತ್ತಿರವಿರುವ ಪೋಸ್ಟ್ ಆಫೀಸ್ ಪಕ್ಕದ ಸಾರ್ವಜನಿಕ ಸ್ಥಳದಲ್ಲಿ ಮಟಕಾ ನಂಬರ್ ಬರೆದುಕೊಳ್ಳುತ್ತಿದ್ದ ಇಬ್ಬರನ್ನು ಪೊಲೀಸರು ಬಂಧಿಸಿದ್ದಾರೆ.

ನಗರದ ರೈಲ್ವೆ ಸ್ಟೇಷನ್ ಏರಿಯಾದ ಸಿಟಿ ಬಸ್ ನಿಲ್ದಾಣದ ಹತ್ತಿರ ಮಟಕಾ ನಂಬರ್ ಬರೆದುಕೊಳ್ಳಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸ್ಟೇಷನ್ ಬಜಾರ್ ಪೊಲೀಸ್ ಠಾಣೆ ಎಎಸ್ಐ ತಿಪ್ಪಣ್ಣ, ಸಿಬ್ಬಂದಿಗಳಾದ ಪ್ರಭಾಕರ, ಯಲ್ಲಪ್ಪ ಅವರು ದಾಳಿ ನಡೆಸಿ ಇಂದಿರಾ ನಗರದ ಶರಣಪ್ಪ ಬಾಜನವರ್ (61) ಎಂಬಾತನನ್ನು ಬಂಧಿಸಿ 520 ರೂ.ನಗದು, ಮಟಕಾ ಚೀಟಿ ಜಪ್ತಿ ಮಾಡಿದ್ದಾರೆ.

ನಗರದ ಖಿಲಾ ಹತ್ತಿರವಿರುವ ಪೋಸ್ಟ್ ಆಫೀಸ್ ಪಕ್ಕದ ಸಾರ್ವಜನಿಕ ಸ್ಥಳದಲ್ಲಿ ಮಟಕಾ ನಂಬರ್ ಬರೆದುಕೊಳ್ಳಲಾಗುತ್ತಿದೆ ಎಂಬ ಮಾಹಿತಿ ಮೇಲೆ ಚೌಕ್ ಪೊಲೀಸ್ ಠಾಣೆ ಎಎಸ್ಐ ತಾರಾಸಿಂಗ್, ಸಿಬ್ಬಂದಿಗಳಾದ ಶಿವಾನಂದ, ಗುರುಮೂರ್ತಿ ಮತ್ತು ಸುರೇಶ್ ಅವರು ದಾಳಿ ನಡೆಸಿ ನತೀನ್ ಜಾಧವ್ (33) ಎಂಬಾತನನ್ನು ಬಂಧಿಸಿ 1130 ರೂ.ನಗದು, ಮಟಕಾ ಚೀಟಿ ಜಪ್ತಿ ಮಾಡಿದ್ದಾರೆ.

ಸ್ಟೇಷನ್ ಬಜಾರ್ ಮತ್ತು ಚೌಕ್ ಪೊಲೀಸ್ ಠಾಣೆಗಳಲ್ಲಿ ಪ್ರತ್ಯೇಕ ಪ್ರಕರಣ ದಾಖಲಾಗಿವೆ.

## ವಿಜಯಪುರ ಜಿಲ್ಲಾ ಚುನಾವಣಾಧಿಕಾರಿಗಳೂ ಆದ ಜಿಲ್ಲಾಧಿಕಾರಿ ಡಾ.ಆನಂದ ಕೆ ಮಾಹಿತಿ

# ಮನೆ ಮನೆ ಗಣತಿ & ಡಿಜಿಟಲೀಕರಣ ಕಾರ್ಯಕ್ಕೆ ವೇಗ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆಗೆ ಸಂಬಂಧಿಸಿದಂತೆ ಮನೆ ಮನೆ ಗಣತಿ ಹಾಗೂ ಡಿಜಿಟಲೀಕರಣ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಪ್ರಸ್ತುತ ಜಿಲ್ಲಾದ್ಯಂತ ಒಟ್ಟು 19,39,677 ಗಣತಿ ನಮೂನೆಗಳನ್ನು ವಿತ–ರಿಸಲಾಗಿದ್ದು, ಗಣತಿ ಕಾರ್ಯವು ಪ್ರಗತಿಯಲ್ಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆದ ಜಿಲ್ಲಾಧಿಕಾರಿ ಡಾ.ಆನಂದ ಕೆ ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಜುಲೈ.16.ರಲ್ಲಿದ್ದಂತೆ ಮತದಾರರ ಪಟ್ಟಿಯಲ್ಲಿ ಒಟ್ಟು 19,82,114 ಮತದಾರರಿದ್ದು, ಗಣತಿ ನಮೂನೆಗಳನ್ನು ಈಗಾಗಲೇ ಆಯಾ ವ್ಯಾಪ್ತಿಯ ಬಿ.ಎಲ್.ಓ ಗಳಿಗೆ ವಿತರಿಸಲಾಗಿದೆ.

ಮನೆಮನೆಗಣತಿ ಹಾಗೂ ಡಿಜಿಟಲೀಕರಣದ ಅವಧಿಯು ದಿನಾಂಕ 30–06–2026 ರಿಂದ ಆರಂಭಗೊಂಡಿದ್ದು, 08–08–2026ರವರೆಗೆ ನಡೆಯಲಿದೆ. ಇದುವರೆಗೆ ಜಿಲ್ಲೆಯಲ್ಲಿ ಕೈಗೊಳ್ಳಲಾದ ಗಣಕೀಕರಣದ ಸದ್ಯದ ಸ್ಥಿತಿಗತಿಯಂತೆ ಒಟ್ಟು 10,08,899 ಗಣತಿ ನಮೂನೆಗಳನ್ನು ಯಶಸ್ವಿಯಾಗಿ ಗಣಕೀಕರಣಗೊಳಿಸಲಾಗಿದೆ. ಇದರಲ್ಲಿ ಆನ್‌ಲೈನ್ ಮೂಲಕ ಮತದಾರರು ಸಲ್ಲಿಸಿದ ಒಟ್ಟು ಗಣತಿ ನಮೂನೆಗಳ ಸಂಖ್ಯೆ 3,321 ಆಗಿದೆ. ಇನ್ನುಳಿದಂತೆ ಕ್ಷೇತ್ರ ಭೇಟಿಯ ಸಮಯದಲ್ಲಿ ವಿವರ ಸಂಗ್ರಹಿಸಲು ಸಾಧ್ಯವಾಗದ ಅಥವಾ ಗೈರುಹಾಜರಾದ ಮತದಾರರ ಸಂಖ್ಯೆ 221 ಆಗಿದ್ದು, ಶಾಶ್ವತವಾಗಿ ಬೇರೆಡೆಗೆ ಸ್ಥಳಾಂತರಗೊಂಡಿರುವ 8,698 ಮತದಾರರನ್ನು ಗುರುತಿಸಲಾಗಿದೆ. ಇದರೊಂದಿಗೆ ಮರಣ ಹೊಂದಿರುವ 9,969 ಮತದಾರರು, ಈಗಾಗಲೇ ನೋಂದಾಯಿಸಿಕೊಂಡಿರುವ 3,176 ಮತದಾರರು ಹಾಗೂ ಇತರೆ 150 ಇದ್ದಾರೆ.

ನಿಗದಿತ ಅವಧಿಯೊಳಗೆ ಜಿಲ್ಲೆಯ ಎಲ್ಲಾ ಅರ್ಹ ಮತದಾರರ ವಿವರಗಳನ್ನು ನಿಖರವಾಗಿ ಪರಿಷ್ಕರಿಸಲು ಬಿ.ಎಲ್.ಓಗಳು ಮನೆ ಮನೆಗೆ ಭೇಟಿ ನೀಡುತ್ತಿದ್ದು, ಸಾರ್ವಜನಿಕರು ಅಗತ್ಯ ದಾಖಲೆ ಮತ್ತು ಮಾಹಿತಿ ನೀಡಿ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

# ವಿವಾದಿತ ಸ್ಥಳದಲ್ಲಿ ತಳವಾರ ಸಮಾಜ ಭವನ :ಕಾಮಗಾರಿ ತಡೆಗೆ ಮನವಿ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಸರ್ವೆ ನಂ.487ರ ಜಾಗವು ವಿವಾದಿತವಾಗಿದ್ದು, ಅದರ ಬಗ್ಗೆ ಸಂಪೂರ್ಣ ಮಾಹಿತಿ ಸಾರ್ವಜನಿಕರಿಗೆ ತಿಳಿಯದೆಯೇ ಸಮಾಜ ಭವನ ನಿರ್ಮಾಣ ಕಾರ್ಯಕೈಗೊಳ್ಳಲಾಗಿದೆ ಎಂದು ಪತ್ರಕರ್ತ ಸಂಗಮೇಶ ಡಿಗ್ಗಿ ಆರೋಪಿಸಿದ್ದಾರೆ.

ಈ ಸ್ಥಳದ ಸುತ್ತಮುತ್ತ ಸರ್ಕಾರಿ ಶಾಲೆಗಳು, ಆದರ್ಶ ಶಾಲೆ ಹಾಗೂ ವಿದ್ಯಾರ್ಥಿ ವಸತಿ ನಿಲಯಗಳಿದ್ದು, ಇಲ್ಲಿ ಸಮಾಜ ಭವನ ನಿರ್ಮಾಣವಾದರೆ ಸಭೆ–ಸಮಾರಂಭಗಳ ಕಾರಣದಿಂದ ಉಂಟಾಗುವ ಶಬ್ದಮಾಲಿನ್ಯ ವಿದ್ಯಾರ್ಥಿಗಳ ಅಧ್ಯಯನಕ್ಕೆ ತೊಂದರೆ ಉಂಟುಮಾಡುವ ಸಾಧ್ಯತೆ ಇದೆ ಎಂದು ಸಂಗಮೇಶ ಡಿಗ್ಗಿ ತಿಳಿಸಿದ್ದಾರೆ.

ಮನವಿ ಸಲ್ಲಿಸಿ ಮಾತನಾಡಿದ ಅವರು, ಇದೇ ಜಾಗವನ್ನು ಒಂದು ಸಮುದಾಯಕ್ಕೆ ನೀಡಿದರೆ, ಮುಂದಿನ ದಿನಗಳಲ್ಲಿ ಇತರೆ ಸಮುದಾಯಗಳು ಹಾಗೂ ಧರ್ಮದವರೂ ಸಹ ಭವನ ಅಥವಾ ಧಾರ್ಮಿಕ ಕೇಂದ್ರಗಳಿಗಾಗಿ ಇದೇ ರೀತಿಯ ಬೇಡಿಕೆ ಮುಂದಿಡುವ ಸಾಧ್ಯತೆ ಇದ್ದು, ಇದರಿಂದ ಸಾಮಾಜಿಕ ಸೌಹಾರ್ದತೆಗೆ ಧಕ್ಕೆಯಾಗುವ ಆತಂಕ ವ್ಯಕ್ತಪಡಿಸಿದ್ದಾರೆ.

ಶಿಕ್ಷಣ ಸಂಸ್ಥೆಗಳ ಸುತ್ತಮುತ್ತ ಜಾತಿ–ಧರ್ಮ ಸಂಬಂಧಿತ ಸಂಘರ್ಷಕ್ಕೆ ಅವಕಾಶ ನೀಡಬಾರದು ಎಂದು ಅವರು ಒತ್ತಾಯಿಸಿದ್ದಾರೆ. ನಗರದಲ್ಲಿ ಸಮುದಾಯ ಭವನ ಅಥವಾ ಧಾರ್ಮಿಕ ಕೇಂದ್ರಗಳನ್ನು ನಿರ್ಮಿಸಬೇಕಾದರೆ, ಲೇಔಟ್‌ಗಳಲ್ಲಿರುವ ಸಿ.ಎ.ಸೈಟ್‌ಗಳಲ್ಲಿ ನಿರ್ಮಿಸಬೇಕು. ಸರ್ವೆ ನಂ.487ರ ಜಾಗದಲ್ಲಿ ಯಾವುದೇ ಒಂದು ಸಮುದಾಯದ ಭವನ ನಿರ್ಮಿಸುವ ಬದಲು, ವಿಜ್ಞಾನ ಕೇಂದ್ರ ಹಾಗೂ ಸಾರ್ವಜನಿಕ ಗ್ರಂಥಾಲಯ ನಿರ್ಮಿಸಲು ಮೀಸಲಿಡಬೇಕು. ಇದರಿಂದ ಸುತ್ತಮುತ್ತಲಿನ ಶಾಲೆ–ಕಾಲೇಜು ಹಾಗೂ ವಿದ್ಯಾರ್ಥಿ ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ಅಧ್ಯಯನಕ್ಕೆ ಅನುಕೂಲವಾಗಲಿದೆ. ಕೂಡಲೇ ಕಾಮಗಾರಿಗೆ ತಡೆ ಹಿಡಿಯಬೇಕು. ಜೊತೆಗೆ ಸರ್ವೆ ನಂ.487ಕ್ಕೆ ಸಂಬಂಧಿಸಿದ ಸಂಪೂರ್ಣ ದಾಖಲೆ ಹಾಗೂ ಮಾಹಿತಿಯನ್ನು ಒದಗಿಸುವಂತೆ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದ್ದಾರೆ. ಈ ವೇಳೆ ಮನವಿಯನ್ನು ಸ್ವೀಕ–ರಿಸಿದ ತಹಶೀಲ್ದಾರ್ ಕರೆಪ್ಪ ಬೆಳ್ಳಿ ಮಾತನಾಡಿ, ಸಂಗಮೇಶ ಡಿಗ್ಗಿ ಅವರು ನೀಡಿದ ಸರ್ವೆ ನಂ.487ರ ಕಂದಾಯ ಇಲಾಖೆಯ ಜಾಗವನ್ನು ಸಮಾಜ ಕಲ್ಯಾಣ ಇಲಾಖೆಗೆ ಮಂಜೂರು ಮಾಡಲಾಗಿದೆ. ಅವರ ಮನವಿಯನ್ನು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದು ಪರಿಹಾರ ಕೊಡಿಸುವ ದಿಸೆಯಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ.



**"ಒಂದು ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾಗಿರುವ ಶಾಸಕರು ಶೈಕ್ಷಣಿಕ ಆವರಣದ ಮಹತ್ವವನ್ನು ಅರಿತುಕೊಳ್ಳಬೇಕಾಗಿತ್ತು. ವಿದ್ಯಾರ್ಥಿಗಳ ಶೈಕ್ಷಣಿಕ ವಾತಾವರಣಕ್ಕೆ ತೊಂದರೆಯಾಗುವ ಸಾಧ್ಯತೆಯಿರುವ ಸ್ಥಳದಲ್ಲಿ ಸಮುದಾಯ ಭವನ ನಿರ್ಮಿಸಲು ಅವಕಾಶ ನೀಡಿರುವುದು ಆಶ್ಚರ್ಯಕರವಾಗಿದೆ. ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಾದ ಜಾಗವನ್ನು ಬಳಸುವ ಸಂದರ್ಭದಲ್ಲಿ ಶಿಕ್ಷಣ ಸಂಸ್ಥೆಗಳ ಹಿತಾಸಕ್ತಿಯನ್ನು ಮೊದಲ ಆದ್ಯತೆಯಾಗಿ ಪರಿಗಣಿಸಬೇಕಿತ್ತು."**

**■ ಸಂಗಮೇಶ ಡಿಗ್ಗಿ**
**ಪತ್ರಕರ್ತ**

# ಶರಣಬಸವೇಶ್ವರ ವಸತಿ ಪಬ್ಲಿಕ್ ಶಾಲೆಯ ವಿದ್ಯಾರ್ಥಿ ಸಂಸತ್ತಿನ ಪದಗ್ರಹಣ



ಕಲಬುರಗಿ: ನಗರದ ಶರಣಬಸವೇಶ್ವರ ವಸತಿ ಪಬ್ಲಿಕ್ ಶಾಲೆಯಲ್ಲಿ 2026–27ನೇ ಸಾಲಿನ ವಿದ್ಯಾರ್ಥಿ ಸಂಸತ್ತಿನ ಪದಗ್ರಹಣ ಸಮಾರಂಭ ಅತ್ಯಂತ ವಿಜೃಂಭಣೆಯಿಂದ ಹಾಗೂ ಶಿಸ್ತಿನ ವಾತಾವರಣದಲ್ಲಿ ನೆರವೇರಿತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಜಿಪಂ ಮುಖ್ಯ ಕಾರ್ಯನಿರ್ವಾಹಕಅಧಿಕಾರಿ ರಾಹುಲ್ ಎಸ್. ಸಂಕನೂರು ಅವರು ಭಾಗವಹಿಸಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.

ನಾಯಕತ್ವವೆಂದರೆ ಅಧಿಕಾರವಲ್ಲ; ಅದು ಸಮಾಜಕ್ಕೆ ಸೇವೆ ಸಲ್ಲಿಸುವ ಜವಾಬ್ದಾರಿ&ಡಣಠಣ; ಎಂದು ಹೇಳಿ, ಪ್ರಾಮಾಣಿಕತೆ,ಶಿಸ್ತು, ವಿನಯ ಹಾಗೂ ಕರ್ತವ್ಯನಿಷ್ಠೆಯಿಂದ ಕಾರ್ಯನಿರ್ವಹಿಸುವಂತೆ ನೂತನ ವಿದ್ಯಾರ್ಥಿ ನಾಯಕ–ರಿಗೆ ಕರೆನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ್ ವಹಿಸಿದ್ದರು. ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ಶಿಸ್ತು, ಸಂಸ್ಕಾರ, ಪರಿಶ್ರಮ ಮತ್ತು ಸೇವಾ ಮನೋಭಾವವೇ ಆದರ್ಶ ನಾಯಕತ್ವದ ಮೂಲಾಧಾರಗಳಾಗಿವೆ ಎಂದು ತಿಳಿಸಿ, ಸಂಸ್ಥೆಯ ಶ್ರೇಷ್ಠ ಪರಂಪರೆಯನ್ನು ಮುಂದುವ–ರಿಸುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಈ ಸಂದರ್ಭದಲ್ಲಿ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ಅವರು ಸಮಾರಂಭದಲ್ಲಿ ಉಪಸ್ಥಿತರಿದ್ದು ನೂತನ ವಿದ್ಯಾರ್ಥಿ ನಾಯಕರಿಗೆ ತಮ್ಮ ಅಮೂಲ್ಯ ಆಶೀರ್ವಚನ ಹಾಗೂ ಮಾರ್ಗದರ್ಶನ ನೀಡಿದರು. ದಾಸೋಹ, ಸೇವೆ, ಶಿಸ್ತು, ಮಾನವೀಯತೆ ಮತ್ತು ಸಾಮಾಜಿಕ ಜವಾಬ್ದಾ–ರಿಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಆದರ್ಶ ನಾಯಕರಾಗಬೇಕು ಎಂದು ವಿದ್ಯಾರ್ಥಿಗಳಿಗೆ ಸಂದೇಶ ನೀಡಿದರು.ಸಮಾರಂಭದ ಪ್ರಮುಖ ಘಟ್ಟವಾಗಿ ನೂತನವಾಗಿ ಆಯ್ಕೆಯಾದ ಶಾಲಾ ನಾಯಕರು, ಹೌಸ್ ನಾಯಕರು, ಉಪನಾಯಕರು ಹಾಗೂ ವಿವಿಧ ಗಳ ನಾಯಕರು ಮತ್ತು ಉಪನಾಯಕರಿಗೆ ಶರಣಬಸವೇಶ್ವರ ವಸತಿ ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯ ಶಂಭುಲಿಂಗ ಅವರು ಕರ್ತವ್ಯ ಪ್ರಮಾಣವಚನ ಬೋಧಿಸಿದರು. ಶಾಲೆಯ ಮೌಲ್ಯಗಳು, ಶಿಸ್ತು ಹಾಗೂ ಪರಂಪರೆಯನ್ನು ಎತ್ತಿಹಿಡಿದು ನಿಷ್ಠೆ ಮತ್ತು ಪ್ರಾಮಾಣಿಕತೆಯಿಂದ ತಮ್ಮ ಜವಾಬ್ದಾ–ರಿಗಳನ್ನು ನಿರ್ವಹಿಸುವುದಾಗಿ ವಿದ್ಯಾರ್ಥಿ ನಾಯಕರು ಪ್ರತಿಜ್ಞೆ ಮಾಡಿದರು.

ಶಾಲಾ ನಾಯಕಿ ಕು. ಭವಾನಿ ಎಸ್. ಅಪ್ಪ ಅವರು ವಿದ್ಯಾರ್ಥಿ ಸಂಸತ್ತಿನ ಪರವಾಗಿ ಮಾತನಾಡಿ, ಶಾಲೆಯು ತಮ್ಮ ಮೇಲಿಟ್ಟಿರುವ ವಿಶ್ವಾಸಕ್ಕೆ ಕೃತಜ್ಞತೆ ಸಲ್ಲಿಸಿ, ಸೇವಾ ಮನೋಭಾವ, ಶಿಸ್ತು ಮತ್ತು ಸಮರ್ಪಣೆಯೊಂದಿಗೆ ತಮ್ಮ ಕರ್ತವ್ಯವನ್ನು ನಿರ್ವಹಿಸುವುದಾಗಿ ಭರವಸೆ ನೀಡಿದರು.

ಶಾಲಾ ನಾಯಕ ಮಾ. ವೈಭವ್ ಆರ್. ಕೆ. ಅವರು ವಿದ್ಯಾರ್ಥಿಗಳಲ್ಲಿ ಐಕ್ಯತೆ, ಸಹಕಾರ, ಜವಾಬ್ದಾರಿ ಹಾಗೂ ಉತ್ತಮನಾಯಕತ್ವವನ್ನು ಬೆಳೆಸಲು ವಿದ್ಯಾರ್ಥಿ ಸಂಸತ್ತು ಸದಾ ಬದ್ಧವಾಗಿರುತ್ತದೆ ಎಂದು ತಿಳಿಸಿದರು.

# ವಿದ್ಯಾರ್ಥಿಗಳು ಮೃದುಕೌಶಲ್ಯ ಬೆಳೆಸಿಕೊಳ್ಳಬೇಕು: ಬಟ್ಟು ಸತ್ಯನಾರಾಯಣ



ಕಲಬುರಗಿ: ವಿಶ್ವ ಯುವ ಕೌಶಲ್ಯ ದಿನದ ಅಂಗವಾಗಿ "ಭವಿಷ್ಯಕ್ಕಾಗಿ ಕೌಶಲ್ಯಗಳು ಎಂಬ ಜಾಗತಿಕ ಧ್ಯೇಯವಾಕ್ಯದಡಿ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿಯುಕೆ) ಸಾಫ್ಟ್ ಸ್ಕಿಲ್ ಡೆವಲಪಮೆಂಟ್ ಸೆಂಟರ್ , ಮಾನವಿಕ ಮತ್ತು ಭಾಷಾ ನಿಕಾಯ ಹಾಗೂ ಸಮಾಜ ಮತ್ತು ವರ್ತನಾ ವಿಜ್ಞಾನ ನಿಕಾಯಗಳ ಸಂಯುಕ್ತ ಆಶ್ರಯದಲ್ಲಿ "ಧ್ವನಿ, ಕ್ರಿಯಾಪದ ಮತ್ತು ದೃಶ್ಯಗಳು: ಭಾಷೆ ಮತ್ತು ಮೃದು ಕೌಶಲ್ಯಗಳು" ವಿಷಯದ ಕುರಿತು ಒಂದು ದಿನದ ಕಾರ್ಯಾಗಾರವನ್ನು ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಿಯುಕೆ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು, ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಕೇವಲ ಶೈಕ್ಷಣಿಕ ಜ್ಞಾನ ಸಾಕಾಗುವುದಿಲ್ಲ. ಶೈಕ್ಷಣಿಕ ಸಾಧನೆಯ ಜೊತೆಗೆ ಪ್ರತಿಯೊಬ್ಬ ವಿದ್ಯಾರ್ಥಿಯೂ ಮೃದು ಕೌಶಲ್ಯಗಳನ್ನು ಬೆಳೆಸಿಕೊಳ್ಳುವುದು ಜೀವನದ ಯಶಸ್ಸಿಗೆ ಅತ್ಯಗತ್ಯ ಎಂದು ಹೇಳಿದರು.

ಇಂದಿನ ಉದ್ಯೋಗ ಕ್ಷೇತ್ರದಲ್ಲಿ ಪರಿಣಾಮಕಾರಿ ಸಂವಹನ, ತಂಡದೊಂದಿಗೆ ಕಾರ್ಯನಿರ್ವಹಿಸುವ ಸಾಮರ್ಥ್ಯ, ನಾಯಕತ್ವ, ಸಮಯ ನಿರ್ವಹಣೆ, ಸೃಜನಶೀಲತೆ, ಹೊಂದಾಣಿಕೆ, ಸಹಾನುಭೂತಿ ಹಾಗೂ ಸಮಸ್ಯೆ ಪರಿಹಾರ ಕೌಶಲ್ಯಗಳು ವೃತ್ತಿಪರ ಮತ್ತು ವೈಯಕ್ತಿಕ ಜೀವನದ ಯಶಸ್ಸಿಗೆ ಪ್ರಮುಖ ಆಧಾರಗಳಾಗಿವೆ. ಆದ್ದರಿಂದ ವಿದ್ಯಾರ್ಥಿಗಳು ಈ ಕೌಶಲ್ಯಗಳನ್ನು ಅಳವಡಿಸಿಕೊಂಡು ತಮ್ಮ ವ್ಯಕ್ತಿತ್ವವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.ವಿದ್ಯಾರ್ಥಿಗಳನ್ನು ಈ ಅಗತ್ಯ ಕೌಶಲ್ಯಗಳಿಂದ ಸಜ್ಜುಗೊಳಿಸುವ ಉದ್ದೇಶದಿಂದ ವಿಶ್ವವಿದ್ಯಾಲಯದಲ್ಲಿ ಸಾಫ್ಟ್ ಸ್ಕಿಲ್ ಡೆವಲಪಮೆಂಟ್ ಸೆಂಟರ್ ಸ್ಥಾಪಿಸಲಾಗಿದ್ದು, ಕೌಶಲ್ಯ ಕೇಂದ್ರ ಆಯೋಜಿಸುವ ವಿವಿಧ ತರಬೇತಿ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಬೇಕು. ಇಂತಹ ತರಬೇತಿಗಳು ವಿದ್ಯಾರ್ಥಿಗಳ ಉದ್ಯೋಗಾರ್ಹತೆಯನ್ನು ಹೆಚ್ಚಿಸುವುದರ ಜೊತೆಗೆ ಅವರನ್ನು ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸಲು ಸಹಕಾರಿಯಾಗುತ್ತವೆ ಎಂದು ತಿಳಿಸಿದರು.

ಸ್ವಾಗತ ಭಾಷಣ ಮಾಡಿದ ಸಾಫ್ಟ್ ಸ್ಕಿಲ್ ಡೆವಲಪಮೆಂಟ್ ಸೆಂಟರನ ನಿರ್ದೇಶಕಿ ಡಾ. ಸುಷ್ಮಾ ಎಚ್. ಅವರು, ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ, ಸಂವಹನ ಕೌಶಲ್ಯ ಹಾಗೂ ವೃತ್ತಿ ಆಧಾರಿತ ಸಾಮರ್ಥ್ಯಗಳನ್ನು ವೃದ್ಧಿಸುವ ಉದ್ದೇಶದಿಂದ ಈ ಕೇಂದ್ರವನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದರು. ಕೇಂದ್ರ ಆಯೋಜಿಸುವ ತರಬೇತಿ, ಕಾರ್ಯಾಗಾರ ಹಾಗೂ ವಿಚಾರ ಸಂಕಿರಣಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಮುಖ್ಯ ಭಾಷಣ ಮಾಡಿದ ಮಾನವಿಕ ಮತ್ತು ಭಾಷಾ ನಿಕಾಯದ ಡೀನ್ ಪ್ರೊ. ವಿಕ್ರಮ್ ವಿಸಾಜಿ ಅವರು, ನಿರಂತರ ಅಭ್ಯಾಸ ಮತ್ತು ಕಲಿಕೆಯ ಮೂಲಕ ಭಾಷಾ ಪ್ರಾವೀಣ್ಯತೆ ವೃದ್ಧಿಯಾಗುತ್ತದೆ ಎಂದು ಹೇಳಿದರು. ಜಾಗತಿಕ ಮಟ್ಟದ ಶೈಕ್ಷಣಿಕ ಹಾಗೂ ವೃತ್ತಿಪರ ಅವಕಾಶಗಳನ್ನು ಪಡೆದುಕೊಳ್ಳಲು ವಿದ್ಯಾರ್ಥಿಗಳು ಓದು, ಬರವಣಿಗೆ ಮತ್ತು ಪರಿಣಾಮಕಾರಿ ಸಂವಹನ ಕೌಶಲ್ಯಗಳನ್ನು ಮತ್ತಷ್ಟು ಬಲಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಮಾಜ ಮತ್ತು ವರ್ತನಾ ವಿಜ್ಞಾನ ನಿಕಾಯದ ಡೀನ್ ಪ್ರೊ. ಪವಿತ್ರಾ ಆಲೂರ್ ಅವರು ಮಾತನಾಡಿ, ಕಲಿಕೆಯು ಜೀವನಪರ್ಯಂತ ನಡೆಯುವ ನಿರಂತರ ಪ್ರಕ್ರಿಯೆಯಾಗಿದ್ದು, ಹೊಸ ಕೌಶಲ್ಯಗಳನ್ನು ಕಲಿಯಲು ವಯಸ್ಸು ಎಂದಿಗೂ ಅಡ್ಡಿಯಾಗುವುದಿಲ್ಲ ಎಂದು ಹೇಳಿದರು. ತಪ್ಪುಗಳನ್ನು ಕಲಿಕೆಯ ಅವಕಾಶಗಳಾಗಿ ಸ್ವೀಕರಿಸಿ, ತಾರ್ಕಿಕ ಚಿಂತನೆ, ಪರಿಣಾಮಕಾರಿ ಸಂವಹನ ಹಾಗೂ ವಿಮರ್ಶಾತ್ಮಕ ವಿಶ್ಲೇಷಣಾ ಸಾಮರ್ಥ್ಯಗಳನ್ನು ಬೆಳೆಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಹೆಚ್ಚುತ್ತಿರುವ ಸ್ಪರ್ಧಾತ್ಮಕ ಆಧುನಿಕ ಜಾಗತಿಕ ವಾತಾವರಣದಲ್ಲಿ ವಿದ್ಯಾರ್ಥಿಗಳು ಯಶಸ್ವಿಯಾಗಲು ಅವರಿಗೆ ಅಗತ್ಯವಾದ ಸಂವಹನ ಕೌಶಲ್ಯ, ನಾಯಕತ್ವದ ಗುಣ, ಪರಸ್ಪರ ಮತ್ತು ಉದ್ಯೋಗ ಕೌಶಲ್ಯಗಳೊಂದಿಗೆ ಸಜ್ಜುಗೊಳಿಸುವ ನಿಟ್ಟಿನಲ್ಲಿ ಈ ಕಾರ್ಯಾಗಾರ ಆಯೋಜನೆ ಮಾಡಲಾಗಿತ್ತು. ಈ ಕಾರ್ಯಾಗಾರದಲ್ಲಿ ವಿಶೇಷ ತಜ್ಞರ ಉಪನ್ಯಾಸಗಳು, ಸಂವಾದಾತ್ಮಕ ಚರ್ಚೆಗಳು, ಪ್ರಶ್ನೋತ್ತರ ಮತ್ತು ಭಾಷಾ ಪ್ರಾವೀಣ್ಯತೆ, ಸಾರ್ವಜನಿಕ ಭಾಷಣ, ಪ್ರಸ್ತುತ ಅಗತ್ಯ ಕೌಶಲ್ಯಗಳು, ತಂಡವಾಗಿ ಕೆಲಸ ನಿರ್ವಹಣೆ ಮತ್ತು ವೃತ್ತಿಪರ ಸಂವಹನದ ಮೇಲೆ ಕೇಂದ್ರೀಕರಿಸುವ ಪ್ರಾಯೋಗಿಕ ಅವಧಿಗಳು ನಡೆದವು. ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಅತ್ಯಂತ ಉತ್ಸಾಹದಿಂದ ಪಾಲ್ಗೊಂಡಿದ್ದರು.

ವಿಶ್ವವಿದ್ಯಾಲಯದ ಆಂಗ್ಲ ಮತ್ತು ವಿದೇಶಿ ಭಾಷಾ ವಿಭಾಗದ ಮುಖ್ಯಸ್ಥ ಪ್ರೊ.ಬಸವರಾಜ ಡೋಣೂರ,ಪ್ರೊ. ಚನ್ನವೀರ ಆರ್.ಎಂ. ಪ್ರೊ. ರೊಮೇಟ್ ಜಾನ್, ಪ್ರೊ. ಶಿವಗಂಗಾ ರುಮ್ಮಾ, ಪ್ರೊ. ಜಯವೇಲ್ ಎಸ್, ಪ್ರೊ.ವಿಜಯೇಂದ್ರ ಪಾಂಡೆ, ಪ್ರೊ. ಗಣೇಶ್ ಪವಾರ್, ಪ್ರೊ. ಸಂದೀಪ್ ವಿಶ್ವನಾಥರಾವ್ ರಣಭೀರ್ಕರ್, ಪ್ರೊ. ಮನೋಹರ್ ಭಂಡಾರೆ, ಪ್ರೊ. ಪ್ರಭಾಕರನ್ ಸೆಲ್ವರಾಜ್; ಡಾ.ಪಿ.ಕುಮಾರ್ ಮಂಗಲಂ, ಡಾ.ಮಲ್ಲಿಕಾರ್ಜುನ್ ಹೂಗಾರ,ಡಾ.ಸಂಜೀವರಾಯಪ್ಪ ಎನ್.ಸಿ, ಡಾ.ರೋಹಿಣಾಕ್ಷ ಶಿರಾಲಾಲು, ಡಾ.ಪಿಯಾಲಿ ರಾಯ್ ಸೇರಿದಂತೆ ವಿವಿಧ ನಿಕಾಯಗಳ ಡೀನರು, ವಿಭಾಗಗಳ ಮುಖ್ಯಸ್ಥರು, ಅಧ್ಯಾಪಕರು, ಸಂಶೋಧನಾ ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.ಕಾರ್ಯಕ್ರಮವು ವಂದೇ ಮಾತರಂ ಗಾಯನದೊಂದಿಗೆ ಆರಂಭಗೊಂಡು, ರಾಷ್ಟ್ರಗೀತೆಯೊಂದಿಗೆ ಸಮಾರೋಪಗೊಂಡಿತು.

# ಕ್ಷಯ ಮುಕ್ತ ಭಾರತ ವಿಶೇಷ ಕಾರ್ಯಕ್ರಮಕ್ಕೆ ಚಾಲನೆ



■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ತಾಲೂಕಿನ ತೆಲಗಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕ್ಷಯ ಮುಕ್ತ ಭಾರತ ಅಭಿಯಾನದಡಿ 100 ದಿನಗಳ ವಿಶೇಷ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಈ ಅಭಿಯಾನದ ಅಂಗವಾಗಿ ಸಂಶಯಾಸ್ಪದ ಕ್ಷಯರೋಗಿಗಳಿಗೆ ಎ.ಐ ಆಧಾರಿತ ಎಕ್ಸ್-ರೇ ಯಂತ್ರದ ಮೂಲಕ ಸ್ಥಳದಲ್ಲೇ ತಪಾಸಣೆ ನಡೆಸಿ, ಶ್ವಾಸಕೋಶ ಸಂಬಂಧಿತ ಕಾಯಿಲೆಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು.

ಆಡಳಿತ ವೈದ್ಯಾಧಿಕಾರಿಗಳಾದ ಡಾ.ನಂದಿನಿ.ಡಿ, ಈ ವೇಳೆ ಮಾತನಾಡಿ, ಎರಡು ವಾರಕ್ಕಿಂತ ಹೆಚ್ಚು ಕಾಲ ಕೆಮ್ಮು, ಜ್ವರ, ತೂಕ ಇಳಿಕೆಯಾಗುವುದು, ಹಸಿವು ಕಡಿಮೆಯಾಗುವುದು ಕ್ಷಯರೋಗದ ಪ್ರಮುಖ ಲಕ್ಷಣಗಳು. ಸಕ್ಕರೆ ಕಾಯಿಲೆ ಇರುವವರು ಮತ್ತು ಧೂಮಪಾನ ಮಾಡುವವರು ಹೆಚ್ಚಿನ ಜಾಗ್ರತೆ ವಹಿಸಬೇಕು. ಟಿಬಿ ರೋಗವು ಕೇವಲ ಶ್ವಾಸಕೋಶಕ್ಕೆ ಮಾತ್ರ ಸೀಮಿತವಲ್ಲದೆ ದೇಹದ ಇತರೆ ಭಾಗಗಳಿಗೂ ಹರಡಬಹುದು. ಸರ್ಕಾರಿ ಆಸ್ಪತ್ರೆಗಳಲ್ಲಿ ಇದರ ಸಂಪೂರ್ಣ ಚಿಕಿತ್ಸೆ ಉಚಿತವಾಗಿ ಲಭ್ಯವಿದೆ" ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಿಜಯಪುರ ಜಿಲ್ಲಾ ಕ್ಷಯರೋಗ ಘಟಕದಿಂದ ತರಿಸಲಾದ ಮೊಬೈಲ್ ಎಕ್ಸ್-ರೇ ಯಂತ್ರದ ಮೂಲಕ ಉಚಿತ ತಪಾಸಣೆ ಮಾಡಿಸಲಾಯಿತು. ಸಂಶಯಾಸ್ಪದ ರೋಗಿಗಳಿಗೆ ಕಫ ಪರೀಕ್ಷೆ (ಸ್ಪ್ಯೂಟಮ್ ಟೆಸ್ಟ್) ಕೂಡ ನಡೆಸಲಾಯಿತು.

ಕಾರ್ಯಕ್ರಮದಲ್ಲಿ ಎಕ್ಸ್-ರೇ ತಜ್ಞರಾದ ಶ್ರೀಶೈಲ್ ವಾಗ್ಮೊರಿ, ಪ್ರವೀಣ, ಎಸ್ ಟಿಎಸ್ ಸಿಬ್ಬಂದಿಗಳಾದ ಎಸ್.ಕೆ. ದೊಡ್ಮನಿ ಸೇರಿದಂತೆ ಪಾಂಡುರಂಗ ಹಳ್ಳದ, ಜಿ.ಸಿ. ಸಂಗಳದ, ಬಿ.ಎಸ್. ಪ್ಯಾಟಿಗೌಡರ, ಬಿ.ಎಸ್. ನೇಕಾರ, ಮಹೇಶ ಬಿರಾದಾರ, ಸುರೇಶ್ ಛಲವಾದಿ, ಶರಣಬಸು ಗುದ್ದಿ ಹಾಗೂ ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

# ಅರಳದಿನ್ನಿಯಲ್ಲಿ ಮಳೆಗಾಗಿ ವಿಶೇಷ ಪ್ರಾರ್ಥನೆ :ಗುರ್ಜಿ ಸೇವೆ

■ ಉದಯರಶ್ಮಿ ದಿನಪತ್ರಿಕೆ

■ ವರದಿ: ಸಿದ್ದಪ್ಪ ಹೂಗಾರ



ಆಲಮಟ್ಟಿ: ಜಿಲ್ಲೆಯಲ್ಲಿ ಮಳೆಯ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ, ಅರಳದಿನ್ನಿ ಗ್ರಾಮದ ಗ್ರಾಮಸ್ಥರು ಮಳೆಗಾಗಿ ದೇವರ ಮೊರೆ ಹೋಗಿದ್ದಾರೆ. ಗ್ರಾಮದ ಆರಾಧ್ಯ ದೇವತೆಯಾದ ಶ್ರೀ ಚಂದ್ರಮ್ಮದೇವಿ ದೇವಸ್ಥಾನದಲ್ಲಿ ವಿಶೇಷ ಪೂಜಾ ಕಾರ್ಯಕ್ರಮ ನೆರವೇರಿಸಿ, ಸಾಂಪ್ರದಾಯಿಕ ಗುರ್ಜಿ ಸೇವೆಯ ಮೂಲಕ ಮಳೆಗಾಗಿ ಪ್ರಾರ್ಥಿಸಲಾಯಿತು.

ಶುಕ್ರವಾರ ಬೆಳಿಗ್ಗೆ ಗ್ರಾಮದ ಮಹಿಳೆಯರು ಹಾಗೂ ಹಿರಿಯರು ದೇವಸ್ಥಾನದಲ್ಲಿ ಒಟ್ಟುಗೂಡಿ ವಿಶೇಷ ಪೂಜೆ ಸಲ್ಲಿಸಿದರು. ಪೂಜೆಯ ಬಳಿಕ ಗ್ರಾಮದ ಪ್ರಮುಖ ಬೀದಿಗಳಲ್ಲಿ ಭಕ್ತಿ ಪೂರ್ವಕವಾಗಿ ಮೆರವಣಿಗೆ ನಡೆಸಲಾಯಿತು.

ಈ ವೇಳೆ ಮಹಿಳೆಯರು ತಲೆಯ ಮೇಲೆ ಗುರ್ಜಿ ಹೊತ್ತು, ಮನೆ ಮನೆಗೆ ಭೇಟಿ ನೀಡಿದರು. ಮನೆಗಳ ಮುಂದೆ ನೀರು ಹಾಕಿಸಿಕೊಂಡು, ಭಕ್ತಿಗೀತೆಗಳು ಮತ್ತು ಸಾಂಪ್ರದಾಯಿಕ ಪದಗಳನ್ನು ಹಾಡುತ್ತಾ ಮಳೆಗಾಗಿ ಬೇಡಿಕೊಂಡರು.

ಮೆರವಣಿಗೆಯ ಸಂದರ್ಭದಲ್ಲಿ ಗ್ರಾಮಸ್ಥರಿಂದ ರೊಟ್ಟಿ, ಅಕ್ಕಿ, ಬೇಳೆ ಮತ್ತು ದುಡ್ಡನ್ನು ಸಂಗ್ರಹಿಸಲಾಯಿತು. ಸಂಗ್ರಹಿಸಿದ ಸಾಮಗ್ರಿಗಳಿಂದ ಇಡೀ ಊರಿಗೆ ಸಾಮೂಹಿಕವಾಗಿ ಪ್ರಸಾದವನ್ನು ತಯಾರಿಸಿ ಗ್ರಾಮ ದೇವತೆಯಾದ ಕೊಣಮ್ಮದೇವಿ ದೇವಸ್ಥಾನದಲ್ಲಿ ವಿತರಿಸಲಾಯಿತು.

"ಮಳೆ ಬಾರದೆ ಬೆಳೆಗಳು ಒಣಗುತ್ತಿವೆ. ದೇವರಲ್ಲಿ ಪ್ರಾರ್ಥಿಸಿದರೆ ಮಳೆ ಬರುತ್ತದೆ ಎಂಬ ನಂಬಿಕೆಯಿಂದ ಈ ಗುರ್ಜಿ ಸೇವೆಯನ್ನು ಮಾಡಿದ್ದೇವೆ" ಎಂದು ಧರ್ಮರ ಮಠದ ಧರ್ಮಾಧಿಕಾರಿ ಚಂದ್ರಶೇಖರ ಧರ್ಮರ ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮದ ನೂರಾರು ಮಹಿಳೆಯರು, ಯುವಕರು ಮತ್ತು ಗ್ರಾಮಸ್ಥರು ಭಾಗವಹಿಸಿದ್ದರು.

ಈ ಗುರ್ಜಿ ಸೇವೆಯಲ್ಲಿ ಗ್ರಾಮದ ಮಹಿಳೆಯರಾದ ಯಮನವ್ವ ಕೊಳ್ಹಾರ, ಮಾದೇವಿ ಹಿರೇಮಠ,ಸೊನವ್ವ ಭಜಂತ್ರಿ, ಸುವರ್ಣ ಹಿರೇಮಠ, ಸೊಮವ್ವ ಕೊಳ್ಹಾರ, ರಾಮಲಿಂಗವ್ವ ಧರ್ಮರ,ಸುನೀತಾ ಪವಾರ, ಸಿವಲಿಂಗವ್ವ ಭಾವಿಕಟ್ಟಿ, ಯಲ್ಲವ್ವ ಮಾದರ, ಸಿನಿಂಗವ್ವ ಮಾದರ, ಮುತ್ತವ್ವ ಮಾದರ ಮತ್ತಿತರರು ಇದ್ದರು.

## ಗ್ರಾಮದಲ್ಲಿ ಹಬ್ಬದ ವಾತಾವರಣ

**ಅರಳದಿನ್ನಿ ಗ್ರಾಮದ ದೇವಸ್ಥಾನದ ಆವರಣದಲ್ಲಿ ಹಾಗೂ ಮೆರವಣಿಗೆ ನಡೆದ ಗ್ರಾಮದ ಬೀದಿಗಳಲ್ಲಿ ಹಬ್ಬದ ವಾತಾವರಣ ಕೂಡಿತ್ತು. ಈ ವಿಶೇಷ ಪೂಜೆ, ಪ್ರಾರ್ಥನೆ ಹಾಗೂ ಗುರ್ಜಿ ಸೇವೆಯಿಂದ ಗ್ರಾಮದಲ್ಲಿ ಉತ್ತಮ ಮಳೆಯಾಗಿ ಬೆಳೆಗಳು ಚೆನ್ನಾಗಿ ಬರಲಿ ಎಂದು ಎಲ್ಲ ಗ್ರಾಮಸ್ಥರು ದೇವರಲ್ಲಿ ಮೊರೆ ಇಟ್ಟಿದ್ದಾರೆ.**

# ಬೆಳೆ ವಿಮೆಗೆ ಅಧಿಸೂಚಿಸಿದ ಬೆಳೆಗಳ ವಿವರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: 2026-27 ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ವಿಮೆ ಕುರಿತು ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯನ್ನು ರಾಜ್ಯ ಸರಕಾರ ಜಾರಿಗೊಳಿಸಿ ಅಧಿಸೂಚನೆ ಹೊರಡಿಸಲಾಗಿದೆ. ಪುಸಕ್ತ ಸಾಲಿನಲ್ಲಿ ಜಿಲ್ಲೆಯಲ್ಲಿ ವಿವಿಧ ಬೆಳೆಗಳಿಗೆ ರೈತರು ಬೆಳೆ ವಿಮೆ ಮಾಡಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ತಿಳಿಸಿದ್ದಾರೆ.

ತಾಲ್ಲೂಕುವಾರು ಹಾಗೂ ಗ್ರಾಮ ಪಂಚಾಯಿತಿವಾರು ಅಧಿಸೂಚಿಸಲಾಗಿರುವ ವಿವಿಧ ಬೆಳೆಗಳ ವಿಮಾ ಮೊತ್ತ ವಿಮಾ ಕಂತು ಮತ್ತು ನೋಂದಣಿಯ ಅಂತಿಮ ದಿನಾಂಕದ ಮಾಹಿತಿಯನ್ನು ರೈತ ಸಂಪರ್ಕ ಕೇಂದ್ರ ಹಾಗೂ ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಗಳಿಗೆ ಸಂಪರ್ಕಿಸಲು ವಿನಂತಿಸಲಾಗಿದೆ. ಈ ಯೋಜನೆಗೆ ಒಳಪಡುವ ವಿವಿಧ ಬೆಳೆಗಳಿಗೆ, ಬೆಳೆ ಸಾಲ ಪಡೆದ ರೈತರು, ಸಾಲ ನೀಡಿದ ಬ್ಯಾಂಕ್ ಗಳಲ್ಲಿ ವಿಮೆ ನೋಂದಾಯಿಸಬೇಕು ಎಂದವರು ತಿಳಿಸಿದ್ದಾರೆ. ಬೆಳೆ ಸಾಲ ಪಡೆಯದ ರೈತರು ನೋಂದಣಿಗಾಗಿ ಅರ್ಜಿಯೊಂದಿಗೆ ರೈತರು ಕೃಷಿ ಸಾಲ ಪಡೆಯದಿರುವ ಕುರಿತು ಕಡ್ಡಾಯವಾಗಿ ಸ್ವಯಂ ಘೋಷಣೆ ಪತ್ರ ಹಾಗೂ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ, ಆಧಾರ ಸಂಖ್ಯೆ ಜೋಡಿಸಿದ ಬ್ಯಾಂಕ್ ಪಾಸ ಬುಕ್ ಮತ್ತು ಆಧಾರದ ಸಂಖ್ಯೆಯೊಂದಿಗೆ ಗ್ರಾಮ್ ಓನ್ ಮತ್ತು ಸಿಎಸ್‌ಸಿ ಕೇಂದ್ರಗಳಿಗೆ ಸಂಪರ್ಕಿಸಬೇಕು ಎಂದವರು ತಿಳಿಸಿದ್ದಾರೆ.

ಅಧಿಸೂಚಿಸಿದ ಬೆಳೆಗಳ ವಿವರ: ಪ್ರತಿ ಎಕರೆ ಮಳೆಯಾಶ್ರಿತ ಉದ್ದು ಬೆಳೆಗೆ 15520 ರೂ. ವಿಮಾ ಮೊತ್ತ ಹಾಗೂ 310 ರೂ. ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಜು. 15 ಕೊನೆ ದಿನ. ಪ್ರತಿ ಎಕರೆ ಮಳೆಯಾಶ್ರಿತ ಸೂರ್ಯಕಾಂತಿ ಬೆಳೆಗೆ 19280 ರೂ. ವಿಮಾ ಮೊತ್ತ ಹಾಗೂ 385 ರೂ. ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಜು. 31 ಕೊನೆ ದಿನವಾಗಿದೆ.

ಪ್ರತಿ ಎಕರೆ ಮಳೆಯಾಶ್ರಿತ ಹೆಸರು ಬೆಳೆಗೆ 15880 ರೂ. ವಿಮಾ ಮೊತ್ತ ಹಾಗೂ 317 ರೂ. ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಜು. 15 ಕೊನೆ ದಿನವಾಗಿದೆ. ಪ್ರತಿ ಎಕರೆ ಮಳೆಯಾಶ್ರಿತ ಸಜ್ಜೆ ಬೆಳೆಗೆ 13920 ರೂ. ವಿಮಾ ಮೊತ್ತ ಹಾಗೂ 278 ರೂ. ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಜು. 31 ಕೊನೆ ದಿನ. ಪ್ರತಿ ಎಕರೆ ನೀರಾವರಿ ಸಜ್ಜೆಗೆ 17320 ರೂ. ವಿಮಾ ಮೊತ್ತ ಹಾಗೂ 346.4 ರೂ. ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಜು. 31 ಕೊನೆ ದಿನ. ಪ್ರತಿ ಎಕರೆ ನೀರಾವರಿ ಸೂರ್ಯಕಾಂತಿಗೆ 23160 ರೂ. ವಿಮಾ ಮೊತ್ತ ಹಾಗೂ 463 ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಜು.31 ಕೊನೆ ದಿನ. ಪ್ರತಿ ಎಕರೆ ನೀರಾವರಿ ನೆಲಗಡಲೆ (ಶೇಂಗಾ) ಬೆಳೆಗೆ 31120 ವಿಮಾ ಮೊತ್ತ ಹಾಗೂ 622 ರೂ. ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಜು. 31 ಕೊನೆ ದಿನ. ಪ್ರತಿ ಎಕರೆ ನೀರಾವರಿ ಟೊಮೆಟೊ ಬೆಳೆಗೆ 67920 ರೂ. ವಿಮಾ ಮೊತ್ತ ಹಾಗೂ 3396 ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಜು. 31 ಕೊನೆ ದಿನವಾಗಿದೆ. ಪ್ರತಿ ಎಕರೆ ನೀರಾವರಿ ಮುಸುಕಿನಜೋಳಕ್ಕೆ 67920 ವಿಮಾ ಮೊತ್ತ ಹಾಗೂ 3396 ರೂ. ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಜು. 31 ಕೊನೆ ದಿನ. ಪ್ರತಿ ಎಕರೆ ಮಳೆಯಾಶ್ರಿತ ಮುಸುಕಿನಜೋಳಕ್ಕೆ 27000 ವಿಮಾ ಮೊತ್ತ ಹಾಗೂ 540 ರೂ. ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಆ. 14 ಕೊನೆ ದಿನವಾಗಿದೆ. ಪ್ರತಿ ಎಕರೆ ನೀರಾವರಿ ಈರುಳ್ಳಿ ಬೆಳೆಗೆ 37560 ವಿಮಾ ಮೊತ್ತ ಹಾಗೂ 1878 ರೂ. ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಜು. 31 ಕೊನೆ ದಿನವಾಗಿದೆ.

ಪ್ರತಿ ಎಕರೆ ನೀರಾವರಿ ತೊಗರಿಗೆ 24120 ವಿಮಾ ಮೊತ್ತ ಹಾಗೂ 482 ರೂ. ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಜು. 31 ಕೊನೆ ದಿನ. ಪ್ರತಿ ಎಕರೆ ಮಳೆಯಾಶ್ರಿತ ತೊಗರಿಗೆ 23040 ವಿಮಾ ಮೊತ್ತ ಹಾಗೂ

460 ರೂ. ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಆ. 14 ಕೊನೆ ದಿನವಾಗಿದೆ. ಪ್ರತಿ ಎಕರೆ ಮಳೆಯಾಶ್ರಿತ ಹತ್ತಿಗೆ 23880 ರೂ. ವಿಮಾ ಮೊತ್ತ ಹಾಗೂ 1194 ರೂ. ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಆ.14 ಕೊನೆ ದಿನವಾಗಿದೆ.ಪ್ರತಿ ಎಕರೆ ನೀರಾವರಿ ಹತ್ತಿಗೆ 34560 ರೂ. ವಿಮಾ ಮೊತ್ತ ಹಾಗೂ 1728 ರೂ. ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಜು. 31 ಕೊನೆ ದಿನವಾಗಿದೆ.

ಪ್ರತಿ ಎಕರೆ ನೀರಾವರಿ ಮೆಣಸಿನಕಾಯಿಗೆ 49800 ವಿಮಾ ಮೊತ್ತ ಹಾಗೂ 2490 ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಜು. 31 ಕೊನೆ ದಿನ.

ಪ್ರತಿ ಎಕರೆ ಮಳೆಯಾಶ್ರಿತ ಹುರುಳಿಗೆ 9400 ವಿಮಾ ಮೊತ್ತ ಹಾಗೂ 188 ರೂ. ವಿಮಾ ಕಂತು ಪ್ರಸ್ತಾವನೆ ಸಲ್ಲಿಸಲು ಜು. 31 ಕೊನೆ ದಿನವಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಇದಕ್ಕೆ ಸಂಬಂಧಿಸಿದಂತೆ ನೋಂದಣಿಗಾಗಿ ರೈತರು ಕಡ್ಡಾಯವಾಗಿ ಎಫ್ ಐಡಿ ಹೊಂದಿರಬೇಕು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿಗಾಗಿ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ಲೋಕ ಸೇವಾ ಆಯೋಗ ಹಾಗೂ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸಲಿರುವ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ಸಿದ್ಧತೆಗಾಗಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ 50 ದಿನಗಳ ವಿಶೇಷ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಮೈಸೂರಿನಲ್ಲಿರುವ ಮುಕ್ತ ವಿಶ್ವವಿದ್ಯಾನಿಲಯದ ಕೇಂದ್ರ ಕಚೇರಿಯಲ್ಲಿ ಈ ತರಬೇತಿ ನಡೆಯಲಿದ್ದು, ಆಸಕ್ತ ಅಭ್ಯರ್ಥಿಗಳು ಜುಲೈ 21ರ ಒಳಗಾಗಿ ಬೆಳಗ್ಗೆ 10 ಗಂಟೆಯಿಂದ ಸಂಜೆ 4:30ರವರೆಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ.

ತರಬೇತಿಯ ವಿವರಗಳು ಹಾಗೂ ಹೆಸರು ನೋಂದಣಿಗೆ ಸಂಬಂಧಿಸಿದ ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ದೂರವಾಣಿ ಸಂಖ್ಯೆ 0821-2515944 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಕರಾಮುವಿ ಕುಲಸಚಿವರಾದ ಪ್ರೊ. ನವೀನ್‌ಕುಮಾರ್ ಎಸ್.ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಕೋರ್ಸ್‌ಗಳಿಗೆ ಪ್ರವೇಶಾತಿ ಆರಂಭ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಪ್ರಾದೇಶಿಕ ಕೇಂದ್ರದಲ್ಲಿ 2026-27ನೇ ಸಾಲಿನ ವಿವಿಧ ಸ್ನಾತಕ, ಸ್ನಾತಕೋತ್ತರ, ಡಿಪ್ಲೊಮಾ ಹಾಗೂ ಸರ್ಟಿಫಿಕೇಟ್ ಕೋರ್ಸ್‌ಗಳ ಪ್ರವೇಶಾತಿ ಪ್ರಾರಂಭವಾಗಿವೆ. ಆಸಕ್ತ ವಿದ್ಯಾರ್ಥಿಗಳು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ www.ksoumysuru.ac.in ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಿ ಪ್ರವೇಶಾತಿ ಪಡೆಯಬಹುದಾಗಿದೆ.

ಬಿಪಿಎಲ್ ಮಹಿಳೆಯರು, ಮಾಜಿ ಸೈನಿಕರು, ಆಟೋ ಕ್ಯಾಬ್ ಚಾಲಕರು ಹಾಗೂ ಕೆ-ಎಸ್‌ಆರ್‌ಟಿಸಿ ನೌಕರರಿಗೆ ಶುಲ್ಕ ರಿಯಾಯಿತಿ ನೀಡಲಾಗಿದ್ದು, ಕೋವಿಡ್‌ನಿಂದ ಪೋಷಕರನ್ನು ಕಳೆದುಕೊಂಡ ವಿದ್ಯಾರ್ಥಿಗಳು, ತೃತೀಯ ಲಿಂಗದವರು ಹಾಗೂ ದೃಷ್ಟಿಹೀನ ವಿದ್ಯಾರ್ಥಿಗಳಿಗೆ ಪೂರ್ಣ ಶುಲ್ಕ ವಿನಾಯಿತಿ ಸೌಲಭ್ಯವಿದೆ. ಅಲ್ಪಸಂಖ್ಯಾತ ವರ್ಗದ ವಿದ್ಯಾರ್ಥಿಗಳಿಗೆ ಸ್ನಾತಕ ಮತ್ತು ಸ್ನಾತಕೋತ್ತರ ಪದವಿಗಳಿಗೆ ಪೂರ್ಣ ಶುಲ್ಕ ವಿನಾಯಿತಿ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ವಿಜಯಪುರ ಪ್ರಾದೇಶಿಕ ಕೇಂದ್ರಕ್ಕೆ ಖುದ್ದಾಗಿ ಭೇಟಿ ನೀಡಿ ಅಥವಾ ಮೊಬೈಲ್ ಸಂಖ್ಯೆ 9483920065, 9110256738 ಹಾಗೂ 7892550053 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪ್ರಾದೇಶಿಕ ನಿರ್ದೇಶಕರ ತಿಳಿಸಿದ್ದಾರೆ.

# ಕಾನೂನು ಸೇವಾ ಸಮಿತಿಯಲ್ಲಿ ಆಡಳಿತ ಸಹಾಯಕ/ಟೈಪಿಸ್ಟ್ ಹುದ್ದೆಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಇಲ್ಲಿನ ಕಾನೂನು ಸೇವಾ ಸಮಿತಿಯಲ್ಲಿ ಖಾಲಿ ಇರುವ ಆಡಳಿತ ಸಹಾಯಕ/ಟೈಪಿಸ್ಟ್ ಹುದ್ದೆಯನ್ನು ಗುತ್ತಿಗೆ ಹಾಗೂ ಸಂಭಾವನೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಒಟ್ಟು 1 ಹುದ್ದೆ ಖಾಲಿ ಇದ್ದು, ಆಯ್ಕೆಯಾದ ಅಭ್ಯರ್ಥಿಗೆ ತಿಂಗಳಿಗೆ 23,376 ಸಂಭಾವನೆ ನೀಡಲಾಗುತ್ತದೆ. ಅರ್ಜಿ ಸಲ್ಲಿಸಲು ಜುಲೈ 29, 2026 ಸಂಜೆ 6 ಗಂಟೆಯವರೆಗೆ ಅವಕಾಶ ಕಲ್ಪಿಸಲಾಗಿದೆ.

**ಅರ್ಹತೆ:** ಯಾವುದೇ ವಿಷಯದಲ್ಲಿ ಪದವಿ ಹೊಂದಿರಬೇಕು. ಉತ್ತಮ ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಜ್ಯೂನಿಯರ್ ಇಂಗ್ಲಿಷ್ ಮತ್ತು ಬೆರಳಚ್ಚು ಪರೀಕ್ಷೆ ತೇರ್ಗಡೆಯಾಗಿರಬೇಕು. ಮತ್ತು ಕನ್ನಡ ಹಾಗೂ ಇಂಗ್ಲಿಷ್ ಭಾಷೆಗಳ ಬಗ್ಗೆ ಉತ್ತಮ ಜ್ಞಾನ ಹೊಂದಿರಬೇಕು.

**ವಯೋಮಿತಿ:ಕನಿಷ್ಠ 18 ವರ್ಷ ಮತ್ತು ಗರಿಷ್ಠ 35 ವರ್ಷ.**

ಸರ್ಕಾರದ ನಿಯಮಾನುಸಾರ ಮೀಸಲಾತಿ ವರ್ಗಗಳಿಗೆ ವಯೋಮಿತಿ ಸಡಿಲಿಕೆ ಅನ್ವಯವಾಗಲಿದೆ.

ಅರ್ಜಿ ಸಲ್ಲಿಕೆ: ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯಲ್ಲಿ ಅಗತ್ಯ ದಾಖಲೆಗಳನ್ನು ಲಗತ್ತಿಸಿ, ಸದಸ್ಯ ಕಾರ್ಯದರ್ಶಿಗಳು, ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ನ್ಯಾಯಾಲಯ ಸಂಕೀರ್ಣ, ಮುದ್ದೇಬಿಹಾಳ 586212 ಇವರಿಗೆ ಸಲ್ಲಿಸಬೇಕು. ಅಪೂರ್ಣ ಹಾಗೂ ಅವಧಿ ಮೀರಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷರಾದ ಸಚಿನ್ ಕೌಶಿಕ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜು.19 ರಂದು ಕಾನಿಪ ಸಂಘದ ವಾರ್ಷಿಕ ಸಾಮಾನ್ಯ ಸಭೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಕಂದಗಲ್ ಹಣಮಂತ್ರಾಯ ರಂಗಮಂದಿರದಲ್ಲಿ ಜುಲೈ 19 ರವಿವಾರ ಬೆಳಿಗ್ಗೆ ಕಾರ್ಯನಿರತ ಪತ್ರಕರ್ತರ ಸಂಘದ ವಿಜಯಪುರ ಜಿಲ್ಲಾ ಘಟಕದ ಸದಸ್ಯರ ವಾರ್ಷಿಕ ಸಾಮಾನ್ಯ ಸಭೆಯನ್ನು ಕರೆಯಲಾಗಿದೆ.

ಪ್ರಸಕ್ತ ಸಾಲಿನ ಹಣಕಾಸು ವಹಿವಾಟು (ಜಮಾ-ಖರ್ಚು) ಮತ್ತು ಭವಿಷ್ಯದ ಯೋಜನೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಗುವುದು.

ಕಾರಣ ಜಿಲ್ಲೆಯ ಎಲ್ಲ ಕಾನಿಪ ಸಂಘದ ಸದಸ್ಯರು ಸಕಾಲಕ್ಕೆ ಆಗಮಿಸಿ ಅಗತ್ಯ ಸಲಹೆ - ಸೂಚನೆಗಳನ್ನು ನೀಡಬೇಕೆಂದು ಸಂಘದ ಜಿಲ್ಲಾ ಅಧ್ಯಕ್ಷ ಅಶೋಕ ಯಡಳ್ಳಿ, ಪ್ರಧಾನ ಕಾರ್ಯದರ್ಶಿ ಇಂದುಶೇಖರ ಮಣೂರ ಮತ್ತು ರಾಜ್ಯ ಕಾರ್ಯಕಾರಿ ಸದಸ್ಯ ಪ್ರಕಾಶ ಬೆಣ್ಣೂರ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಬ್ಯಾಂಕ್ ಗ್ರಾಹಕರೊಂದಿಗೆ ಸಹಾನುಭೂತಿಯಿಂದ ವರ್ತಿಸಿ

## ತ್ರೈಮಾಸಿಕ ಡಿಸ್ಟ್ರಿಕ್ಟ್ ಕನ್ಸಲ್ಟೇಟಿವ್ ಕಮಿಟಿ ಸಭೆ ಹಾಗೂ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಬ್ಯಾಂಕರ್ಸ್‌ಗಳಿಗೆ ಜಿ.ಪಂ. ಸಿಇಓ ರಿಷಿ ಆನಂದ ಸೂಚನೆ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಗ್ರಾಹಕರು ಬ್ಯಾಂಕಿಗೆ ಕಾರ್ಯ ನಿಮಿತ್ತ ಆಗಮಿಸಿದ ಸಂದರ್ಭದಲ್ಲಿ ಅವರ ಕುಂದು ಕೊರತೆ ಆಲಿಸುವ ಮೂಲಕ ಅವರಿಗೆ ಸರಿಯಾಗಿ ಸ್ಪಂದನೆ ಮಾಡಬೇಕು. ಬ್ಯಾಂಕುಗಳಿಗೆ ಆಗಮಿಸುವ ಗ್ರಾಹಕರೊಂದಿಗೆ ಸಹಾನುಭೂತಿಯಿಂದ ವರ್ತಿಸಬೇಕು. ಸಕಾರಾತ್ಮಕ ಮನೋಭಾವದೊಂದಿಗೆ ಅವರ ಸಮಸ್ಯೆಗಳಿಗೆ ಕಿವಿಯಾಗಬೇಕು. ಆರ್.ಬಿ.ಐ ಮಾರ್ಗಸೂಚಿ ಪ್ರಕಾರ ಬ್ಯಾಂಕ್ ಯೋಜನೆಗಳ ಬಗ್ಗೆ ಗ್ರಾಹಕರಿಗೆ ಜಾಗೃತಿ ಮೂಡಿಸಬೇಕು ಮತ್ತು ಸೌಲಭ್ಯಗಳ ಕುರಿತು ಮಾರ್ಗದರ್ಶನ ನೀಡಬೇಕು ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಿಷಿ ಆನಂದ ಅವರು ಹೇಳಿದರು ಅವರು, ಜಿಲ್ಲಾ ಪಂಚಾಯತಿಯ ಸಭಾಂಗಣದಲ್ಲಿ ನಡೆದ ಜಿಲ್ಲಾ ಅಗ್ರಣೀಯ (ಲೀಡ್) ಬ್ಯಾಂಕ್ ವತಿಯಿಂದ ತ್ರೈಮಾಸಿಕ ಡಿಸ್ಟ್ರಿಕ್ಟ್ ಕನ್ಸಲ್ಟೇಟಿವ್ ಕಮಿಟ ಸಭೆ ಹಾಗೂ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಈ ಸೂಚನೆ ನೀಡಿದರು.

ಸಾಲ ಸೌಲಭ್ಯಗಳಿಗಾಗಿ ಅರ್ಜಿ ಸಲ್ಲಿಸಿದವರ ಅರ್ಜಿಗಳನ್ನು ಬಾಕಿ ಬಾಕಿ ಉಳಿಸಿಕೊಳ್ಳುವಂತಿಲ್ಲ. ಬ್ಯಾಂಕ್ ಸಾಲಗಳಿಗೆ ಅರ್ಜಿ ಸಲ್ಲಿಸಿದಾಗ ಒಂದು ವೇಳೆ ದಾಖಲಾತಿಗಳು ಅಪೂರ್ಣ ಇದ್ದಲ್ಲಿ ಗ್ರಾಹಕರಿಗೆ ಸರಿಯಾದ ಮಾರ್ಗದರ್ಶನ ಮಾಡಬೇಕು. ಪ್ರತಿಯೊಬ್ಬ ಗ್ರಾಹಕರ ಅರ್ಜಿಗಳನ್ನು ನಿಗದಿತ ಸಮಯದಲ್ಲಿ ವಿಲೇವಾರಿ ಮಾಡಲೇಬೇಕು. ಸರ್ಕಾರವು ಜಾರಿಗೊಳಿಸುವ ಯೋಜನೆಗಳ ಲಾಭ ಅರ್ಹರಿಗೆ ತಲುಪಿಸುವ ನಿಟ್ಟಿನಲ್ಲಿ ಬ್ಯಾಂಕಿನಲ್ಲಿ ಅರ್ಹ ಫಲಾನುಭವಿಗಳ ದಾಖಲೆ ಅನುಸಾರ ಬ್ಯಾಂಕ್ ಸಾಲ ಸೌಲಭ್ಯ ಅರ್ಜಿ ಪರಿಶೀಲನೆ ನಡಸಿ ಬೇಗ ಇತ್ಯರ್ಥಗೊಳಿಸಬೇಕು.. ಎಲ್ಲಾ ಯೋಜನೆಗಳ ಸದುಪಯೋಗ ಪಡಿಸಿಕೊಳ್ಳುವಂತೆ ಫಲಾನುಭವಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಬೇಕು.

ವಿವಿಧ ಇಲಾಖೆಗಳಡಿ ಇರುವ ಯೋಜನೆಗಳಾದ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ(-ಎನ್.ಆರ್.ಎಲ್.ಎಮ್) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಇರುವ ಉದ್ಯೋಗಿನಿ ಯೋಜನೆ, ಡಿ ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಡಿ ಇರುವ ಸ್ವಾವಲಂಭಿ ಸಾರಥಿ ಯೋಜನೆ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಸ್ವಾವಲಂಭಿ ಟ್ಯಾಕ್ಸಿ, ಗೂಡ್ಸ್, ಆಟೋ ರಿಕ್ಷಾ ಯೋಜನೆಗಳು, ಡಾ. ಬಿ. ಆರ್. ಅಂಬೇಡ್ಕರ್ ನಿಗಮದ ಯೋಜನೆಗಳು, ಪ್ರಧಾನ ಮಂತ್ರಿಗಳ ಉದ್ಯೋಗ ಸೃಷ್ಟಿ ಕಾರ್ಯಕ್ರಮ, ಸಮಾಜ ಕಲ್ಯಾಣ ಇಲಾಖೆಯ ಉದ್ಯಮ ಶೀಲತಾ, ಸ್ವಾವಲಂಭಿ ಸಾರಥಿ, ಪ್ರಧಾನ ಮಂತ್ರಿ ಆವಾಸ್ ಯೋಜನೆ(ನಗರ), ಕೃಷಿ ಇಲಾಖೆಯ ಪ್ರಧಾನ ಮಂತ್ರಿ ಸೂಕ್ಷ್ಮ ಆಹಾರ ಸಂಸ್ಕರಣಾ ಉದ್ದಿಮೆಗಳ ಔಪಚಾರಿಕೀಕರಣ ಯೋಜನೆ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ, ಹೆಸ್ಕಾಂ ಇಲಾಖೆಯ ಪ್ರಧಾನ ಮಂತ್ರಿ ಸೂರ್ಯ ಘರ್: ಮುಫ್ತ್ ಬಿಜ್ಲಿ ಯೋಜನೆ, ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ, ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ, ಅಟಲ್ ಪಿಂಚಣಿ ಯೋಜನೆಗಳ ಅಡಿಯಲ್ಲಿ ಅನೇಕ ಫಲಾನುಭವಿಗಳು ಸಾಲ ಸೌಲಭ್ಯಗಳಿಗಾಗಿ ಅರ್ಜಿ ಸಲ್ಲಿಸಿರುತ್ತಾರೆ. ಆದರೆ ಇಂತಹ ಅರ್ಜಿಗಳನ್ನು ಬ್ಯಾಂಕುಗಳಲ್ಲಿ ಬಾಕಿ ಉಳಿಸಿಕೊಂಡಿರುವುದು ಗಮನಕ್ಕೆ ಬಂದಿರುತ್ತದೆ. ಫಲಾನುಭವಿಗಳ ಬಾಕಿ ಉಳಿದ ಅರ್ಜಿಗಳನ್ನು ಪರಿಶೀಲಿಸಿ ಅತ್ಯಂತ ತುರ್ತಾಗಿ ವಿಲೇವಾರಿಗೆ ಕ್ರಮವಹಿಸಬೇಕು. ಒಂದು ವಾರದಲ್ಲಿ ಬಾಕಿ ಉಳಿದ ಎಲ್ಲಾ ಅರ್ಜಿಗಳನ್ನು ಪರಿಶೀಲಿಸಿ ಸಂಪೂರ್ಣವಾಗಿ ವಿಲೇವಾರಿ ಮಾಡುವುದು. ಒಂದು ವೇಳೆ ವಿಳಂಬವಾದಲ್ಲಿ ಸಂಬಂದಪಟ್ಟ ಬ್ಯಾಂಕ್ ವ್ಯವಸ್ಥಾಪಕರ ಮೇಲೆ ಶಿಸ್ತು ಕ್ರಮ ಕೈಗೊಳ್ಳುವುದಾಗಿ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಯೋಜನಾ ನಿರ್ದೇಶಕರಾದ ಅಶೋಕ ಕಲಘಟಗಿ, ಜಿಲ್ಲಾ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕ (ಲೀಡ್ ಬ್ಯಾಂಕ ಡಿಸ್ಟ್ರಿಕ್ಟ್ ಮ್ಯಾನೇಜರ್) ಬಿ. ಸಿದ್ದಯ್ಯ, ಆರ್.ಬಿ.ಐ ವ್ಯವಸ್ಥಾಪಕರಾದ ಸಿಲ್ ಪ್ರಿಯಾ ಗೌತಮ್, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು.

# ಆಲಮೇಲ ಪಪಂ ಅಧ್ಯಕ್ಷ ಸುಂಬಡ ವಿರುದ್ಧ ಅವಿಶ್ವಾಸ ನಿರ್ಣಯ

■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಪಟ್ಟಣ ಪಂಚಾಯತಿ ಅಧ್ಯಕ್ಷ ಕಾಂಗ್ರೆಸ್ ಪಕ್ಷದ ಸದಸ್ಯ ಸಾಧಿಕ ಫರಿದಾಸಬ ಸುಂಬಡ ಅವರನ್ನು ಅಧ್ಯಕ್ಷ ಸ್ಥಾನದ ಅವಿಶ್ವಾಸ ನಿಲುವಳಿ ಮಂಡಿಸಲು 12 ಸದಸ್ಯರು ಸಹಿ ಮಾಡಿ ಮುಖ್ಯಾಧಿಕಾರಿ ರವಿ ಸಿರಗುಪ್ಪಿ ಅವರಿಗೆ ಶುಕ್ರವಾರ ಮನವಿ ಸಲ್ಲಿಸಿದರು.

ಒಟ್ಟು 19 ಸಂಖ್ಯಾಬಲದ ಸದಸ್ಯರನ್ನು ಹೊಂದಿರುವ ಆಲಮೇಲ ಪಟ್ಟಣ ಪಂಚಾಯತಿ ಜಿಲ್ಲೆಯಲ್ಲಿಯೇ ದೊಡ್ಡ ಪಟ್ಟಣಪಂಚಾಯತಿ ಆಗಿದೆ , 10 ಸದಸ್ಯರು ಬೆಂಬಲ ಬೇಕಿರುವ ಈಗಿನ ಅಧ್ಯಕ್ಷರಿಗೆ 12 ಸದಸ್ಯರು ಬೆಂಬಲ ಹಿಂಪಡೆದುಕೊಂಡಿದ್ದಾರೆ. ಬಿಜೆಪಿ, ಕಾಂಗ್ರೆಸ್ ನಿಂದ ತಲಾ ಎಂಟು ಸದಸ್ಯರು ಚುನಾಯಿತರಾಗಿದ್ದು ಮೂವರು ಪಕ್ಷೇತರರು ಆಯ್ಕೆಯಾಗಿದ್ದರು. ಈಗ ಅವಿಶ್ವಾಸ ನಿಲುವಳಿ ಸಭೆ ನಡೆಸುವಂತೆ ಆಗ್ರಹಿಸಿದ. ಅಧ್ಯಕ್ಷ ಸಾದಿಕ ಸುಂಬಡ ಅವಧಿಯಲ್ಲಿನ ಅಕ್ರಮಗಳ ತನಿಖೆ ನಡೆಸಬೇಕೆಂದು ಆಗ್ರಹಿಸಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಸದಸ್ಯ ಸಂಜೀವಕುಮಾರ ಯಂಟಮಾನ ' ಅಧ್ಯಕ್ಷರು ಏಕಪಕ್ಷೀಯವಾಗಿ ನಡೆದುಕೊಳ್ಳುತ್ತಿದ್ದಾರೆ, ಸದಸ್ಯರ ಗಮನಕ್ಕೂ ತರದೆ ತೀರ್ಮಾನ ಮಾಡುತ್ತಿದ್ದು, ಸರಿಯಾದ ಕ್ರಮವಲ್ಲ , ಕೆ.ಪಿ.ಆರ್ ಸಕ್ಕರೆ ಕಾರ್ಖಾನೆ ತೆರಿಗೆ, ತರಕಾರಿ ಮಾರುಕಟ್ಟೆಯ ಲಿಲಾವಿನಿಂದ ಬಂದ ಲಕ್ಷಾಂತರ ವಿವಿಧ ಮೂಲಗಳಿಂದ ಬಂದ ಹಣದ ಸಂಗ್ರಹದ ಕುರಿತು ಮಾಹಿತಿ ನೀಡದೇ ಅಕ್ರಮವಾಗಿ ಬಳಸಿರುವ ಮಾಹಿತಿ ಇದೆ, ಅದರ ಕುರಿತು ಸಮಗ್ರ ತನಿಖೆ ಆಗಬೇಕು ಹಾಗೂ ಅವಿಶ್ವಾಸ ಸಭೆ ನಡೆಯುವವರೆಗೂ ಯಾವುದೆ ಆರ್ಥಿಕ ಅನುಮೋದನೆ ಮಾಡುವದಾಗಲಿ ಮಾಡಲಿಕ್ಕೆ ಅವಕಾಶ ನೀಡಬಾರದು, ದುರ್ಬಳಕೆಯಾಗದಂತೆ ತಡೆಹಿಡಿಯಬೇಕು ಎಂದು ಆಗ್ರಹಿಸಿದರು.

ಬಿಜೆಪಿ ಪಕ್ಷದ ಸದಸ್ಯರಾದ ಸಂಜಯಕುಮಾರ ಯಂಟಮನ ಮತ್ತು ಪಕ್ಷೇತರ ಸದಸ್ಯ ಉಮರ್ ಬಿಳವಾರ ನೇತೃತ್ವದಲ್ಲಿ ಉಪಾಧ್ಯಕ್ಷೆ ಸುಮಾ ಕತ್ತಿ, ಸದಸ್ಯರಾದ ಚಂದ್ರಕಾಂತ ಕಾಂಬಳೆ, ಚಂದ್ರಶೇಖರ ಹಳೆಮನಿ, ಜುಬೇದಾಬೇಗಂ ಸುಂಬಡ, ಹಣಮಂತ ಹೂಗಾರ, ರೇಣುಕಾ ಭೋವಿ, ಬಿಸ್ಮಿಲ್ಲಾ ಮಸಳಿ ಹಾಗೂ ಕಾಂಗ್ರೆಸ್ ಪಕ್ಷದ ಅಶೋಕ ಕೊಳಾರಿ, ವಿಜಯಲಕ್ಷ್ಮಿ ಜರಕರ, ಯಲ್ಲಮ್ಮ ನಾಯ್ಕೋಡಿ ಸೇರಿದಂತೆ 12 ಜನ ಸದಸ್ಯರು ಅವಿಶ್ವಾಸ ಪತ್ರಕ್ಕೆ ಸಹಿ ಹಾಕಿ ಮುಖ್ಯಧಿಕಾರಿಗೆ ಮನವಿ ಸಲ್ಲಿಸಿದ್ದಾರೆ.

**"ಆಲಮೇಲ ಪಟ್ಟಣ ಪಂಚಾಯತಿಯಲ್ಲಿ ಸಾಕಷ್ಟು ಅವ್ಯವಹಾರ ನಡೆದಿದ್ದು ಕಂಡುಬಂದಿದೆ, ಈ ಕುರಿತು ಲೋಕಾಯುಕ್ತ ತನಿಖೆ ನಡೆಸಬೇಕು ಹಾಗೂ ಜಿಲ್ಲಾಧಿಕಾರಿಗಳು ಸೂಕ್ತ ತನಿಖೆ ನಡೆಸಿ ಕ್ರಮ ಕೈಕೊಳ್ಳಬೇಕು."**

**■ ಸಂಜೀವಕುಮಾರ ಯಂಟಮಾನ**
**ಪಪಂ ಸದಸ್ಯರು**

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR